# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 190 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 13–02–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 01 Issue - 190 | Title- Code: KARKAN 28269 | Chitradurga | Date: 13-02-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ನಡೆಯುವ ಪ್ರತಿಭಟನೆಗೆ ಸಿಪಿಐ ಬೆಂಬಲ 2

ನಕಲಿ ಕಾರ್ಮಿಕರನ್ನು ಗುರುತಿಸಿ, ಸೌಲಭ್ಯ ಸ್ಥಗಿತಗೊಳಿಸಿ: ಶಾಸಕ ಬಿ.ಜಿ ಗೋವಿಂದಪ್ಪ 3

ರಾಜ್ಯ ಕೈಗಾರಿಕೆಗಳ ಪುನಶ್ಚೇತನಕ್ಕೆ ಪ್ರಾಮಾಣಿಕ ಪ್ರಯತ್ನ : ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಸಮಸ್ಯೆ ಬಂದಿತೆಂದು ಭಯಪಡಬೇಡಿ, ಆ ಸಮಸ್ಯೆಗೆ ನಿಮ್ಮಲ್ಲಿಯೇ ಪರಿಹಾರವಿದೆ. ಸ್ವಲ್ಪ ಹುಡುಕಿ... ಯಾಕೆಂದರೆ.....???? ಈ ಭೂಮಿ ಮೇಲೆ ಕೇವಲ ಬೆಂಕಿ ಅಷ್ಟೇ ಅಲ್ಲ, ಅದರ ಜೊತೆಗೆ ನೀರು ಕೂಡಾ ಇದೆ.

» ಶುಭೋದಯ

## ಫಾಸ್ಟ್ ನ್ಯೂಸ್

### ಯುನಾನಿ ಚಿಕಿತ್ಸಾ ವಿಭಾಗ ಆರಂಭ



» ಚಿತ್ರದುರ್ಗ

ರಾಷ್ಟ್ರೀಯ ಯುನಾನಿ ದಿನಾಚರಣೆಯ ಅಂಗವಾಗಿ ಸೋಮವಾರ ಹಿರಿಯೂರು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಆಯುಷ್ (ಯುನಾನಿ) ಚಿಕಿತ್ಸಾ ವಿಭಾಗವನ್ನು ಆರಂಭಿಸಲಾಯಿತು. ಆಡಳಿತ ವೈದ್ಯಾಧಿಕಾರಿ ಡಾ. ಕುಮಾರ್ ನಾಯ್ಕ್ ಅವರು ಆಯುಷ್ (ಯುನಾನಿ) ವಿಭಾಗ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಎಸ್.ಚಂದ್ರಕಾಂತ್ ನಾಗಸಮುದ್ರ, ಆಯುಷ್ ಪದ್ಧತಿಯಾದ ಯುನಾನಿಯೂ ಒಂದು ಉತ್ತಮ ವೈದ್ಯಪದ್ಧತಿಯಾಗಿದ್ದು, ವಾರದಲ್ಲಿ ಮಂಗಳವಾರ ಹಾಗೂ ಗುರುವಾರ ಈ ಆಸ್ಪತ್ರೆಗೆ ಯುನಾನಿ ವೈದ್ಯ ಡಾ.ಜಿಯಾ ಉರ್ ರೆಹಮಾನ್ ಆಗಮಿಸಲಿದ್ದು, ಸಾರ್ವಜನಿಕರು ಇದರ ಪೂರ್ಣ ಪ್ರಯೋಜನ ಪಡೆಯಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಗಳಾದ ಡಾ. ಟಿ.ಶಿವಕುಮಾರ್, ಡಾ.ಜಿಯಾ ಉರ್ ರೆಹಮಾನ್ ಆಯುಷ್ ಸಿಬ್ಬಂದಿ ಬಸವರಾಜ್ ಇದ್ದರು.

### ಸುಧಾರಿತ ಬೇಸಾಯ ಕ್ರಮಗಳ ಕುರಿತು ತರಬೇತಿ

» ಚಿತ್ರದುರ್ಗ

ಹಿರಿಯೂರುತಾಲ್ಲೂಕಿನಬಬ್ಬೂರುಫಾರಂನಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಫೆ.15ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ರೈತರಿಗೆ "ಮಾವು ಮತ್ತು ಬಾಳೆ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬಬ್ಬೂರು ಫಾರಂ ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕೆ ತಜ್ಞ ಡಾ. ಮಹಾಂತೇಶ್ ಮತ್ತು ಕೀಟ ಶಾಸ್ತ್ರಜ್ಞ ಡಾ. ರುದ್ರಮುನಿ ಇವರು ಮಾವು ಮತ್ತು ಬಾಳೆ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳು, ಪೋಷಕಾಂಶಗಳ ನಿರ್ವಹಣೆ, ರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು. ನಂತರ ಹಿರಿಯೂರು ತಾಲ್ಲೂಕಿನ ಭೀಮನಬಂಡೆ ಗ್ರಾಮದ ಪ್ರಗತಿಪರ ರೈತ ಬಿ.ಶಿವಮೂರ್ತಿ ಅವರು ಮಾವಿನ ಬೆಳೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ತಮ್ಮ ಅನುಭವ ಹಂಚಿಕೊಳ್ಳಲಿದ್ದಾರೆ.

ಹೊಳಲ್ಕೆರೆ ತಾಲ್ಲೂಕಿನ ತಾಳ್ಯ ಹೋಬಳಿಯ ಕೆರೆಯಾಗಲಹಳ್ಳಿಯ ಕೆ.ಎಸ್.ರಾಮಸ್ವಾಮಿ ಅವರು ಬಾಳೆ ಬೆಳೆಯಲ್ಲಿ ಹೆಚ್ಚಿನ ಇಳುವರಿ ಪಡೆಯಲು ಅನುಸರಿಸಿದ ವಿವಿಧ ಕ್ರಮಗಳ ಕುರಿತು ತಮ್ಮ ಅನುಭವ ಹಂಚಿಕೊಳ್ಳುವರು. ಆಸಕ್ತ 50 ಜನ ರೈತ ಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಉಷಾರಾಣಿ ಎಂ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) (9980730696), ಟಿ.ಪಿ. ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931028) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ಈ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ತಿಳಿಸಿದ್ದಾರೆ.

# ಚಳ್ಳಕೆರೆಯ ಬಂಗಾರದ ಮನುಷ್ಯನಿಗೆ ಒಲಿದ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ

## ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷರಾಗಿ ಟಿ.ರಘುಮೂರ್ತಿ ಅಧಿಕಾರಿ ಸ್ವೀಕಾರ

## ಹರಿದ ಬಂದ ಅಭಿನಂದನೆಗಳ ಮಹಾಪೂರ, ಕಾರ್ಯಕರ್ತರ ಸಂಭ್ರಮ,ಗಣ್ಯರು ಶುಭ ಹಾರೈಕೆ



ಶಾಸಕ ಟಿ.ರಘುಮೂರ್ತಿ ಅವರ ನಿಗಮ ಮಂಡಳಿ ಕಚೇರಿಗೆ ತೆರಳಿ ಅಧಿಕಾರ ಸ್ವೀಕರಿಸಿದ ಶಾಸಕರಿಗೆ ಶುಭಹಾರೈಸಿ ರಘುಮೂರ್ತಿ ಅವರ ಕರ್ತವ್ಯನಿಷ್ಠೆಯಲ್ಲಿ ಇನ್ನೊಬ್ಬರಿಗೆ ಮಾದರಿಯಾಗಿದ್ದಾರೆ ಎಂದು ಬಣ್ಣಿಸಿದರು.

» ಡಿ.ಸುಧಾಕರ್ ಜಿಲ್ಲಾ ಉಸ್ತುವಾರಿ ಸಚಿವರು ಚಿತ್ರದುರ್ಗ ಜಿಲ್ಲೆ

**ನಮ್ಮಜನ ವಿಶೇಷ**



ಇಂದು ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ್ದೇನೆ. ಇಲಾಖೆಯಲ್ಲಿ ಏನೆಲ್ಲಾ ಸೌಲಭ್ಯಗಳು ದೊರೆಯುತ್ತದೆ ಎಂದು ತಿಳಿದು ಹೆಚ್ಚಿನ ಜನರಿಗೆ ಸಹಾಯ ಮಾಡಲು ಶ್ರಮಿಸುತ್ತೇನೆ.

» ಟಿ.ರಘುಮೂರ್ತಿ ಶಾಸಕರು ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷರು

» **ವಿಶೇಷ ವರದಿ: ದರ್ಶನ್ ಇಂಗಳದಾಳ್**

ಚಳ್ಳಕೆರೆ: ಒಂದು ಕಾಲದಲ್ಲಿ ಬರದ ನಾಡು , ಹಿಂದುಳಿದ ಪ್ರದೇಶ ಎಂಬ ಹಣೆಪಟ್ಟಿ ಹೊತ್ತುಕೊಂಡು ಸದ್ದು ಮಾಡುತ್ತಿದ್ದ ಚಳ್ಳಕೆರೆ ಈಗ ಅಭಿವೃದ್ಧಿ ನಗರಿ, ಶೈಕ್ಷಣಿಕ ನಗರಿ, ಅಭಿವೃದ್ಧಿ ಅಂದರೆ ಚಳ್ಳಕೆರೆ ನೋಡಬೇಕು, ಚಳ್ಳಕೆರೆಯಂತೆ ನಮ್ಮ ಊರಲ್ಲಿ ಏಕೆ ಆಗಲ್ಲಪ್ಪ ಎಂಬ ಮಾತು ಚಳ್ಳಕೆರೆ ಸೇರಿ ಜಿಲ್ಲಾ ಮಟ್ಟದಲ್ಲಷ್ಟೆ ಅಲ್ಲದೇ ಇಡೀ ರಾಜ್ಯದಲ್ಲಿ ಚಳ್ಳಕೆರೆ ಅಭಿವೃದ್ಧಿ ಸದ್ದು ಮಾಡುವಂತೆ ಮಾಡಿದ್ದು ಚಳ್ಳಕೆರೆ ಕ್ಷೇತ್ರದ ಸೋಲಿಲ್ಲದ ಸರದಾರ ಹ್ಯಾಟ್ರಿಕ್ ಹೀರೋ ಶಾಸಕ ಟಿ.ರಘುಮೂರ್ತಿ ಅವರ ಮಾಡಿದ ಐತಿಹಾಸಿಕ ಕಾರ್ಯಗಳು.

ಈ ನಿಟ್ಟಿನಲ್ಲಿ ಅವರ ಅಪಾರವಾದ ಪಕ್ಷನಿಷ್ಠೆಯನ್ನು ಗುರುತಿಸಿ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಕರ್ನಾಟಕ ರಾಜ್ಯ ಕೈಗಾರಿಕಗಳ ಮಂಡಳಿಯ ಅಧ್ಯಕ್ಷರಾಗಿ ನಿಯುಕ್ತಿಗೊಳಿಸಿದ್ದು, ಅವರು ಸೋಮವಾರ ನಿಗಮದ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದರು.

ಒಬ್ಬ ವ್ಯಕ್ತಿಗೆ ಅಧಿಕಾರ ಸಿಕ್ಕರೆ ಸಾಕು ಏನೆಲ್ಲ ಅಧಿಕಾರ ಬಳಸಿಕೊಳ್ಳಬೇಕು ಎಂಬುದನ್ನು ಕಾಯುತ್ತಿರುವ ನಡುವೆ ಹಲವರಿದ್ದಾರೆ. ಅಧಿಕಾರವಲ್ಲ ಇದು ಜನರು ಕೊಟ್ಟಿರುವ ಅವಕಾಶ ನನ್ನ ಕೆಲಸ ಅಧಿಕಾರ ಚಲಾಯಿಸುವುದಲ್ಲ ಜನಸೇವೆ ಮಾಡುವುದು, ಜನರ ಕಷ್ಟಗಳಿಗೆ ಧ್ವನಿಯಾಗಿ , ಜನರ ಜೊತೆ ಇರಬೇಕು ಎಂಬ ಭಾವನೆಯೊಂದಿಗೆ ಸದಾ ಜನರ ಪ್ರೀತಿ ವಿಶ್ವಾಸ ಗಳಿಸುವ ಜೊತೆಗೆ ಸರಳವಾಗಿ ಕಾಯಕ ನಡೆಸುತ್ತಾರೆ. ಎಂದು ಸಹ ಅಧಿಕಾರಕ್ಕಾಗಿ ಲಾಬಿ ಮಾಡಲಿಲ್ಲ, ಒತ್ತಡ ಹಾಕಿಸಲಿಲ್ಲ ಕ್ಷೇತ್ರದ ಅಭಿವೃದ್ಧಿ ನನ್ನ ಗುರಿ ಎಂಬ ತತ್ವವನ್ನು ಅಳವಡಿಸಿಕೊಂಡಿದ್ದಾರೆ.

**ಅಭಿವೃದ್ಧಿಗೆ ಹ್ಯಾಟ್ರಿಕ್ ಹೀರೋ ಆದ ಶಾಸಕ ಟಿ.ರಘುಮೂರ್ತಿ:** ಟಿ.ರಘುಮೂರ್ತಿ ಅವರಿಗೆ ಚಳ್ಳಕೆರೆ ಇತಿಹಾಸದಲ್ಲಿ ಯಾರು ಸಹ ಹ್ಯಾಟ್ರಿಕ್ ಗೆಲುವು ಸಾಧಿಸಿರಲಿಲ್ಲ ಆದರೆ ಹ್ಯಾಟ್ರಿಕ್ ಗೆಲುವು ಸಾಧಿಸಿ ಇತಿಹಾಸ ಬರೆದರು ಸಹ ಇದು ಜನರ ಗೆಲುವು , ಜನರ ಪ್ರೀತಿ ವಿಶ್ವಾಸ ಗೆದ್ದಿದೆ, ನನ್ನ ಅಭಿವೃದ್ಧಿಗೆ ಮತ ಹಾಕಿದ್ದಾರೆ ಎಂಬ ಮಾತುಗಳನ್ನಾಗಡಿ ಐತಿಹಾಸಿಕ ಚಳ್ಳಕೆರೆ ಗೆಲುವನ್ನು ಜನರಿಗೆ ಅರ್ಪಿಸುವ ದೊಡ್ಡ ಗುಣದಿಂದ ಬಯದೆಯಾ ಸರ್ಕಾರ ಕಳೆದ ಕಾಂಗ್ರೆಸ್– ಜೆಡಿಎಸ್ ಸರ್ಕಾರದಲ್ಲಿ ಹಟ್ಟಿ ಚಿನ್ನದ ಗಣಿ ನಿಗಮ ನೀಡಿತ್ತು. ಈಗ ಪೂರ್ಣ ಬಹುಮತ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಆಡಳಿತದಲ್ಲಿದ್ದು ಚಿತ್ರದುರ್ಗ ಜಿಲ್ಲೆಗೆ ಸಚಿವರಾಗುತ್ತಾರೆ ಎಂಬ ಹೆಬ್ಬಯಕೆ ಜನರಲ್ಲಿ ಮನೆ ಮಾಡಿತ್ತು ಆದರೆ ಅನೇಕ ಲೆಕ್ಕಚಾರದಲ್ಲಿ ಕೊನೆ ಕ್ಷಣದಲ್ಲಿ ಬದಲಾಗಿ ಮುಂದಿನ ದಿನದಲ್ಲಿ ಸಚಿವ ಸಂಪುಟ ಸೇರುವ ಅವಕಾಶ ಮುಂದಿದೆ ಎಂಬ ಮಾತು ರಾಜಕೀಯ ವಲಯದಲ್ಲಿ ಕೇಳಿ ಬರುತ್ತಿರುವ ನಡುವೆ ಸಿಎಂ ಅವರು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ನಿಗಮ ನಿಯಮಿತ ಅಧ್ಯಕ್ಷರಾಗಿ ನೇಮಿಸಿ ಹೊಸ ಜವಬ್ದಾರಿಯನ್ನು ವಹಿಸಿದ್ದು ಅಚ್ಚುಕಟ್ಟಾಗಿ ನಿರ್ವಹಿಸುವದರಲ್ಲಿ ಎರಡು ಮಾತಿಲ್ಲ.

**ಜನರ ಮನದಲ್ಲಿ ಅಚ್ಚಳಿಯದೇ ಉಳಿದಿವೆ ಅಭಿವೃದ್ಧಿ ಕಾರ್ಯಗಳು:** ಹಣದಿಂದ ಎಲ್ಲಾವನ್ನು ಸಾಧಿಸಬಹುದು ಎಂಬ ಮಾತು ಇದೆ.ಆದರೆಅಭಿವೃದ್ಧಿಮಾಡಿದರೆ ಜನರಜ ಕೈಬಿಡುವುದಿಲ್ಲ ಎಂಬುದನ್ನು ನಂಬಿರುವ ರಘುಮೂರ್ತಿ ಅವರು ಕ್ಷೇತ್ರದಲ್ಲಿ ಜನರ ನಿರೀಕ್ಷೆ ಮೀರಿ ಶಾಶ್ವತ ಅಭಿವೃದ್ಧಿ ಕೆಲಸಗಳನ್ನು ಮಾಡಿದರು ವಿಶೇಷವಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ಹೆಚ್ಚು ಬದಲಾವಣೆಯನ್ನು ತಂದ ಕೀರ್ತಿ ರಘುಮೂರ್ತಿಯವರದ್ದು. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಜಿಟಿಟಿಸಿ ಸ್ಥಾಪನೆ ಅವರ ಹೆಗ್ಗಳಿಕೆ. ಡಿಆರ್‌ಡಿಒ, ಭಾರತೀಯ ವಿಜ್ಞಾನ ಸಂಸ್ಥೆ ಹಾಗೂ ಎಂಜಿನಿಯರಿಂಗ್ ಕಾಲೇಜು ಆರಂಭದಿಂದಾಗಿ ಸೈನ್ಸ್ ಸಿಟಿಯಾಗಿ ಪರಿವರ್ತನೆಯಾಗಿದೆ. ಶಾಸಕ ರಘು ಮೂರ್ತಿ ಅವಿರತ ಶ್ರಮದಿಂದ 51 ಕೆರೆಗಳ ನೀರು ತುಂಬಿಸುವ ಯೋಜನೆಗೆ ಸೇರ್ಪಡೆಯಾಗಿದೆ. ಪರುಶುರಾಂಪುರ ಭಾಗದಲ್ಲಿ ಹರಿಯುವ ವೇದಾವತಿ ನದಿಗೆ ಅಡ್ಡಲಾಗಿ ಕಟ್ಟಿರುವ ಆರು ಚೆಕ್ ಡ್ಯಾಂಗಳ ನಿರ್ಮಾಣದಿಂದ 365 ದಿನ ಕೃಷಿಚಟುವಟಿಕೆಗೆ ದಾರಿ. ನಗರ ಸೇರಿ ಗ್ರಾಮಾಂತರ ಪ್ರದೇಶಗಳಲ್ಲಿ ಭವನಗಳು, ಸಿಸಿ ರಸ್ತೆಗಳು, ಶುದ್ಧ ನೀರು ಘಟಕ ಸ್ಥಾಪನೆಯಾಗಿದೆ. ಸ್ವಂತ ಕಟ್ಟಡಗಳ ಶಾಲೆಗಳ ನಿರ್ಮಾಣ, ಸರ್ಕಾರಿ ಕಟ್ಟಡಗಳು, ಹಾಸ್ಟೆಲ್ ನಿರ್ಮಾಣದಿಂದ ಅಭಿವೃದ್ಧಿ ಮಾಡುತ್ತ ಸಾಗುತ್ತಿದ್ದಾರೆ.

**ಸರ್ಕಾರದ ಗ್ಯಾರೆಂಟಿಗಳನ್ನು ಮನೆ ಬಾಗಿಲಿಗೆ:** ರಾಜ್ಯ ಸರ್ಕಾರ ಬಂದ ತಕ್ಷಣದಿಂದ ಗ್ಯಾರೆಂಟಿ ಯೋಜನೆಗಳ ಜಾರಿಗೆ ಸಾಕಷ್ಟು ಶ್ರಮಿಸುವ ಸಂದರ್ಭದಲ್ಲಿಶಾಸಕಟಿ.ರಘುಮೂರ್ತಿ ಅವರು ಗ್ರಾಮ ಪಂಚಾಯತಿ ಮಟ್ಟದಲ್ಲಿ ಜನಸಂಪರ್ಕ ಸಭೆ ನಡೆಸುವ ಮೂಲಕ ಪ್ರತಿ ಮನೆ ಬಾಗಿಲಿಗೆ ಗ್ಯಾರೆಂಟಿ ಯೋಜನೆ ಮಟ್ಟಿಸುವ ಕೆಲಸ ಮಾಡಿದರು.ಪ್ರತಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ಯಾರೆಂಟಿ ಯೋಜನೆ ಅನುಷ್ಠಾನ ಜೊತೆಗೆ ಜನರ ಅಧಿಕಾರಿಗಳ ತಂಡದ ಜೊತೆ ವಿಧವ ವೇತನ, ಹಿರಿಯ ನಾಗರಿಕರ ವೇತನ, ದಾರಿ ಸಮಸ್ಯೆ, ವಿಕಲಚೇತನ ವೇತನ, ಗೃಹಲಕ್ಷ್ಮಿ ಅರ್ಜಿ ತೊಂದರೆಗಳು, ಸ್ಮಶಾನ ಸಮಸ್ಯೆ, ನೀರಿನ ಸಮಸ್ಯೆ, ಈ ಸ್ವತ್ತು ಹಲವಾರು ವರ್ಷಗಳಿಂದ ಬಾಕಿ ಇದ್ದ ಅರ್ಜಿಗಳಿಗೆ ಅಂತ್ಯ ಹಾಡುವ ಕೆಲಸವನ್ನು ಮಾಡಿದರು. ನಗರ ವ್ಯಾಪ್ತಿಯಲ್ಲಿ ಜನಸ್ಪಂದನ ಕಾರ್ಯಕ್ರಮ ಮೂಲಕ ಚಳ್ಳಕೆರೆ ನಗರದ ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸಿದರು.


ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನೂತನ ಅಧ್ಯಕ್ಷ ಟಿ.ರಘುಮೂರ್ತಿ ಮಾತು ಪುಟ 2










## ಫಾಸ್ಟ್ ನ್ಯೂಸ್

### ಗಮನ ಸೆಳೆದ ರಂಗೋಲಿ ಸ್ಪರ್ಧೆ

» ದಾವಣಗೆರೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಶುಕ್ರವಾರ ಹೆಣ್ಣು ಮಕ್ಕಳನ್ನು ರಕ್ಷಿಸಿ, ಹೆಣ್ಣು ಮಕ್ಕಳನ್ನು ಓದಿಸಿ, ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಿಸಿ, ಹೆಣ್ಣು ಮಕ್ಕಳ ಮೇಲಿನ ಲಿಂಗ ಮತ್ತು ಶೋಷಣೆ ವಿರುದ್ಧ ಹೋರಾಡಿ ಅಭಿಯಾನದಡಿ ಹಮ್ಮಿಕೊಂಡಿದ್ದ ರಂಗೋಲಿ ಸ್ಪರ್ಧೆ ಗಮನ ಸೆಳೆಯಿತು. ಈ ವೇಳೆ ಭಾರತದ ಭೂಪಟ ಜೊತೆಗೆ ಸಂವಿಧಾನ ಪೀಠಿಕೆ ಅರಳಿತು.ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಿಲ್ಲಾಧಿಕಾರಿ ಡಾ.ಎಂ.ವಿ. ವೆಂಕಟೇಶ್ ಪ್ರಶಸ್ತಿ ಪತ್ರಗಳನ್ನು ವಿತರಣೆ ಮಾಡಿದರು. ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಸಂತಿ ಉಪ್ಪಾರ್ ಸೇರಿದಂತೆ ಮತ್ತಿತರರು ಇದ್ದರು.

### ವಿದ್ಯುತ್ ಅವಘಡ



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಸಿದ್ದೇಶ್ವರದುರ್ಗ ಗ್ರಾಮದಲ್ಲಿ ವಿದ್ಯುತ್ ಶಾರ್ಟ್‌ಸರ್ಕ್ಯೂರ್ಟ್‌ನಿಂದ ಶಿವಪ್ಪ ಎಂಬುವವರ ಮನೆಯಲ್ಲಿದ್ದ ಟಿ.ವಿ, ಫ್ಯಾನ್, ಇನ್ನಿತರೆ ವಸ್ತುಗಳು ಸುಟ್ಟು ಅಪಾರ ನಷ್ಟ ಸಂಭವಿಸಿದೆ. ಬೆಳಗ್ಗೆ ಸುಮಾರು 8.30ರ ಸಮಯದಲ್ಲಿ ಈ ಅವಘಡ ಸಂಭವಿಸಿದ್ದು ದಿಢೀರನೇ ಆದ ಈ ಘಟನೆಯಿಂದ ಮನೆಯವರು ಹಾಗೂ ಮನೆಯ ಸುತ್ತಮುತ್ತಲ ಜನರು ಗಾಬರಿಗೊಂಡಿದ್ದಾರೆ. ಇದೇ ಸಂದರ್ಭದಲ್ಲಿ ಮನೆಯ ಮೇಲ್ಚಾವಣಿ ಶೀಟ್ ಕುಸಿದುಬಿದ್ದ ಪರಿಣಾಮವಾಗಿ ಬಟ್ಟೆ, ಬರೆ ಇತರೆ ಸಾಮಾಗ್ರಿಗಳು ಸಹ ಹಾನಿಗೊಳಗಾಗಿವೆ. ಸುಮಾರು 50 ಸಾವಿರಕ್ಕೂ ನಷ್ಟ ಸಂಭವಿಸಿದೆ ಎಂದು ಶಿವಪ್ಪ ತಿಳಿಸಿದ್ದಾರೆ.

### ಅಕ್ರಮ ಮದ್ಯ ಮಾರಾಟ

» ಚಳ್ಳಕೆರೆ

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಗರಣಿಕ್ರಾಸ್‌ನಲ್ಲಿ ಬಸವರಾಜ ಎಂಬುವವರಿಗೆ ಸೇರಿದ ಹೋಟೆಲ್ ಅಂಗಡಿಯಲ್ಲಿ ಕಾನೂನು ಬಾಹಿರವಾಗಿ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದ ಬಗ್ಗೆ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಬಸವರಾಜ ಎಂಬುವವರನ್ನು ವಶಕ್ಕೆ ಪಡೆದು ಆಕ್ರಮವಾಗಿ ದಾಸ್ತಾನು ಮಾಡಿದ್ದ ಸುಮಾರು ಎಂಟು ಸಾವಿರ ಮೌಲ್ಯದ ವಿವಿಧ ಮದ್ಯದ ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಪಿಎಸ್‌ಐ ಧರಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ದಾರ

### ಕೆ.ಎನ್.ಶಶಿರಾಜ್‌ಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ಚಿತ್ರದುರ್ಗತಾಲ್ಲೂಕಿನಜಿ.ಆರ್.ಹಳ್ಳಿಯದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಸ್ಯಶಾಸ್ತ್ರ ವಿಭಾಗದಲ್ಲಿ ಸಹಾಯಕ ಬೋಧಕರಾಗಿ ಕಾರ್ಯನಿರ್ವ ಹಿಸುತ್ತಿರುವ ಕೆ.ಎನ್.ಶಶಿರಾಜ್ ಅವರು ಮಂಡಿಸಿದ ಮಹಾಪ್ರಬಂಧಕ್ಕೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾನಿಲಯ ಡಾಕ್ಟರೇಟ್ ಪದವಿ ನೀಡಿದೆ. ಧಾರವಾಡಜಿಲ್ಲೆಯಕರ್ನಾಟಕವಿಶ್ವವಿದ್ಯಾನಿಲಯದ ಸಸ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಹಾಗೂ ಮಾರ್ಗದರ್ಶಕ ಡಾ.ಶ್ರೀನಿವಾಸ ನಾಯಕ ಅವರ ಮಾರ್ಗದರ್ಶನದಲ್ಲಿ 'ಬಯೋಫ್ಯಾಬ್ರಿಕೇಶನ್ ಆಫ್ ಸಿಲ್ವರ್ ನಾನೋಪಾರ್ಟಿಕಲ್ಸ್ ಯುಸಿಂಗ್ ಫ್ಲವರ್ ಬಡ್ಸ್ ಎಕ್ಸ್ಟ್ರಾಕ್ಟ್ ಆಫ್ ಸೆಲೆಕ್ಟೆಡ್ ಮೆಂಬರ್ಸ್ ಆಫ್ ಲ್ಯಾಮಿಯೆಸಿ ಆಂಡ್ ಇವ್ಯಾಲ್ಯುಯೇಶನ್ ಆಫ್ ದೇರ್ ಮೈಕೊಟಾಕ್ಸಿಕ್ ಪೊಟೆನ್ಸಿ ಆನ್ ಡಿಸೀಸಸ್ ಆಫ್ ಸೊರ್ಘಮ್ ಎಂಬ ವಿಷಯದ ಕುರಿತು ಮಹಾಪ್ರಬಂಧ ಮಂಡಿಸಿದ್ದರು.ಕೆ.ಎನ್.ಶಶಿರಾಜ್ ಇವರ ಸಂಶೋಧನ ಲೇಖನಗಳು ಅನೇಕ ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ನಿಯತಕಾಲಿಕೆಗಳಲ್ಲಿ ಪ್ರಕಟಗೊಂಡಿರುತ್ತವೆ ಹಾಗೂ ಸಂಶೋಧನ ಪೂರಕವಾಗಿ ಹಲವಾರು ವಿಶ್ವವಿದ್ಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗವಹಿಸಿ ಸಂಶೋಧನ ವಿಷಯಗಳನ್ನು ಮಂಡಿಸಿರುತ್ತಾರೆ.

### ನಾಟಕ ಪ್ರದರ್ಶನ

» ಚಿತ್ರದುರ್ಗ

ರಂಗಭೂಮಿ ಟ್ರಸ್ಟ್ ಕೊಡಗು, ವಿಶ್ವಹಿಂದೂ ಪರಿಷತ್ ಮತ್ತು ಸಂಸ್ಕಾರ ಭಾರತಿ ಚಿತ್ರದುರ್ಗ ವತಿಯಿಂದ ಕರಿನೀರ ವೀರ ದೇಶಭಕ್ತಿ ಸಾಕ್ಷಿ ಪ್ರಜ್ಞೆ ವೀರ ಸಾವರ್ಕರ್ ಬದುಕಿನ ಕಥಾನಕ ನಾಟಕ ಫೆ.13 ರ ಇಂದು ಸಂಜೆ 6-30 ಕ್ಕೆ ತ.ರಾ.ಸು. ರಂಗಮಂದಿರದಲ್ಲಿ ಪ್ರದರ್ಶನಗೊಳ್ಳಲಿದೆ. ಅಡ್ಡಂಡ ಕಾರ್ಯಪ್ಪ ರಚನೆ, ಪರಿಕಲ್ಪನೆ, ವಿನ್ಯಾಸ, ನಿರ್ದೇಶನವಿರುತ್ತದೆ.

# ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನೂತನ ಅಧ್ಯಕ್ಷ ಟಿ.ರಘುಮೂರ್ತಿ ಮಾತು










» ಚಿತ್ರದುರ್ಗ

ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಮಂಡಳಿಯ ಸೌಲಭ್ಯಗಳನ್ನು ಜನರಿಗೆ ತಲುಪಿಸಿ ಸಣ್ಣ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡಲಾಗುತ್ತದೆ ಎಂದು ಚಳ್ಳಕೆರೆ ಕ್ಷೇತ್ರದ ಶಾಸಕರು ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಮಂಡಳಿ ನೂತನ ಅಧ್ಯಕ್ಷರಾದ ಟಿ.ರಘುಮೂರ್ತಿ ಅವರು ತಿಳಿಸಿದರು.

ಬೆಂಗಳೂರುನಗರದರಾಜಾಜಿನಗರದಲ್ಲಿ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ ಕಚೇರಿಯಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಅಧಿಕಾರ ಸ್ವೀಕಾರ ಮಾಡಿ ಮಾತನಾಡಿದರು.

ರಾಜ್ಯದ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ಮತ್ತು ಸಚಿವರ ಸಹಕಾರ ಪಡೆಯುವ ಮೂಲಕ ಸಣ್ಣ ಕೈಗಾರಿಕೆ ಸೌಲಭ್ಯಗಳನ್ನು ಜನರಿಗೆ ಮಟ್ಟಿಸುವ ಕೆಲಸವನ್ನು ಮಾಡುತ್ತೇನೆ. ಸಣ್ಣ ಕೈಗಾರಿಕೆಗಳ ಬಡವರ ಬದುಕನ್ನು ರೂಪಿಸುತ್ತವೆ. ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ, ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗೆ ಸಣ್ಣ ಕೈಗಾರಿಕೆ ನಿಗಮದಲ್ಲಿನ ಸೌಲಭ್ಯ ಒದಗಿಸಲು ಪ್ರಮಾಣಿಕ ಪ್ರಯತ್ನ ಮಾಡಲಾಗುತ್ತದೆ.

ರಾಜ್ಯದಲ್ಲಿ ನಮ್ಮ ಕಾಂಗ್ರೆಸ್ ಸರ್ಕಾರ ಆಡಳಿತದಲ್ಲಿದ್ದು ಹೆಚ್ಚಿನ ಅನುದಾನ ಪಡೆಯುವ ಮೂಲಕ ಹೆಚ್ಚು ಜನರಿಗೆ ಸಣ್ಣ ಕೈಗಾರಿಕೆ ಸ್ಥಾಪಿಸಲು ಪ್ರೋತ್ಸಾಹ ನೀಡಿದರೆ ಹೆಚ್ಚು ಉದ್ಯೋಗ ಸೃಷ್ಟಿಯಾಗುತ್ತದೆ. ಗ್ರಾಮೀಣ ಭಾಗದಲ್ಲಿ ಸಣ್ಣ ಕೈಗಾರಿಕೆಗಳ ಆರಂಭದಿಂದ ಯುವಕ ಯುವತಿಯರಿಗೆ ಹೆಚ್ಚು ಅನುಕೂಲವಾಗುತ್ತದೆ. ನಗರ ಪ್ರದೇಶಕ್ಕೆ ಆಗಮಿಸುವವರ ಸಂಖ್ಯೆ ಸ್ವಲ್ಪ ಮಟ್ಟಿಗೆ ಕಡಿಮೆಯಾಗುತ್ತದೆ. ಇಲಾಖೆಯ ಸಂಪೂರ್ಣ ಮಾಹಿತಿ ಪಡೆಯುವ ಮೂಲಕ ಹಂತ ಹಂತವಾಗಿ ಎಲ್ಲಾ ಸೌಲಭ್ಯ ಒದಗಿಸಲು ಶ್ರಮಸುತ್ತೇನೆ ಎಂದು ಹೇಳಿದರು.

ಸಚಿವರು ,ಮುಖಂಡರ ಮತ್ತು ಕಾರ್ಯಕರ್ತರಿಂದ ಅಭಿನಂದನೆ: ಬೆಂಗಳೂರು ರಾಜಾಜಿನಗರದ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ನಿಗಮ ನಿಯಮಿತ ಕಚೇರಿಯಲ್ಲಿ ಶಾಸಕ ಟಿ.ರಘುಮೂರ್ತಿ ಅಧಿಕಾರಿ ಸ್ವೀಕಾರ ಮತ್ತು ಪೂಜಾ ಕಾರ್ಯಕ್ರಮಕ್ಕೆ ನಡೆಯಿತು. ಶಾಸಕರಾಗಿ ಹತ್ತು ವರ್ಷಗಳನ್ನು ಪೂರೈಸಿ 11ನೇ ವರ್ಷಕ್ಕೆ ಕಾಲಿಟ್ಟಿದ್ದು, ಮಂಡಳಿಯ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಈ ಶುಭ ಸಮಾರಂಭಕ್ಕೆ ಶಾಸಕರ ಪತ್ನಿ ಗಾಯಿತ್ರಿ ರಘುಮೂರ್ತಿ, ಪುತ್ರಿ ಸುಚಿತ್ರ ಸಹ ಸಾಕ್ಷಿಯಾದರು.

ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಸುಧಾಕರ್ ಖುದ್ದು ಹಾಜರಿದ್ದರು.ನಂತರ ಶಾಸಕರಾದ , ಕೆ.ಸಿ.ವೀರೇಂದ್ರ ಪಪ್ಪಿ, ಕೆಪಿಸಿಸಿ ಕಾರ್ಯಾಧ್ಯಕ್ಷ ಬಿ.ಎನ್.ಚಂದ್ರಪ್ಪ, ಮಾಜಿ ಸಚಿವ ಹೆಚ್.ಆಂಜನೇಯ, ಮುಖಂಡರಾದ ಹೊಳಲ್ಕೆರೆ ಸವಿತಾ ರಘು, , ಚಿತ್ರದುರ್ಗ ಲೋಕಸಭೆ ಕ್ಷೇತ್ರದ ಆಕಾಂಕ್ಷಿಗಳಾದ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ವಿನಯ ತಿಮ್ಮಾಪುರ, ರಾಮಪ್ಪ, ಕೆಪಿಸಿಸಿ ಕಾರ್ಮಿಕ ವಿಭಾಗದ ಜಿ.ಎಸ್.ಮಂಜುನಾಥ್, ಜಿಲ್ಲಾ ಕಾಂಗ್ರೆಸ್ ಕಾರ್ಯಧ್ಯಕ್ಷ ಹಾಲೇಶ್,ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್ ಪೀರ್, ಚಳ್ಳಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಭದ್ರಪ್ಪ, ಶಶಿಧರ್ ಮತ್ತು ಸಾವಿರಾರು ಕಾರ್ಯಕರ್ತರು ಕಚೇರಿ ಮುಂಭಾಗ ಜಮಾಯಿಸಿ ಹೂವಿನ ಹಾರ ಹಾಕಿ ಶುಭ ಹಾರೈಸಿ ಸಂಭ್ರಮಿಸಿದರು.

# ಓಬಳನರಸಿಂಹಸ್ವಾಮಿ ವಿಗ್ರಹ ಪ್ರತಿಷ್ಠಾಪನೆ ಯಶಸ್ವಿ





» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಬೊಮ್ಮನಕುಂಟೆ ಗ್ರಾಮದ ಶ್ರೀಓಬಳನರಸಿಂಹಸ್ವಾಮಿ ದೇವಸ್ಥಾನದ ವಿಗ್ರಹ ಪ್ರತಿಷ್ಠಾಪನಾ ಕಾರ್ಯ ಅದ್ದೂರಿಯಾಗಿ ನಡೆಯಿತು. ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು ಹಾಗೂ ಭಕ್ತರು ಸೇರಿ ವಿಗ್ರಹಪ್ರತಿಷ್ಠಾಪನಾ ಕಾರ್ಯ ಯಶಸ್ವಿಯಾಗಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪೂಜಾರಿನರಸಪ್ಪ, ಶ್ರೀಓಬಳನರಸಿಂಹಸ್ವಾಮಿ ದೇವಸ್ಥಾನಕ್ಕೆ ತನ್ನದೇಯಾದ ಇತಿಹಾಸವಿದೆ. ಈ ಭಾಗದ ಸಾವಿರಾರು ಭಕ್ತರ ಆರಾಧ್ಯದೈವ ಶ್ರೀಓಬಳನರಸಿಂಹಸ್ವಾಮಿ ನಡೆದ ವಿಗ್ರಹ ಪ್ರತಿಷ್ಠಾಪನಾ ಕಾರ್ಯದಲ್ಲಿ ನಿರೀಕ್ಷೆಗೂ ಮೀರಿ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸಿದ್ಧಾರೆ. ಎಲ್ಲರಿಗೂ ಶ್ರೀಓಬಳನರಸಿಂಹಸ್ವಾಮಿ ಜೀವನದಲ್ಲಿ ಸುಖ, ಶಾಂತಿ, ನೆಮ್ಮದಿ ನೀಡಲಿ ಎಂದು ಗ್ರಾಮದ ಜನತೆಯ ಪರವಾಗಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.ವಿಗ್ರಹ ಪ್ರತಿಷ್ಠಾಪನೆಗೂ ಮುನ್ನ ಗ್ರಾಮದ ನೂರಾರು ಮಹಿಳೆಯರು ಕುಂಭಮೇಳದೊಂದಿಗೆ ಹಳ್ಳಕ್ಕೆ ತೆರಳಿ ಗಂಗಾಪೂಜೆ ನೆರವೇರಿಸಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿಕುಂಭಹೊತ್ತ ಮಹಿಳೆಯರು ಮಂಗಳವಾದ್ಯದೊಂದಿಗೆ ಸಾಗಿದರು. ವಿವಿಧ ಗ್ರಾಮಗಳಿಂದ ಬಂದಿದ್ದ ಭಕ್ತರು ದೇವರ ದರ್ಶನ ಪಡೆದು ಪುನೀತರಾದರು.ವಿಗ್ರಹಪ್ರತಿಷ್ಠಾಪನಾ ಕಾರ್ಯದಲ್ಲಿ ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ನೂರಾರು ಭಕ್ತರು ಆಗಮಿಸಿದ್ದು, ದೇವಸ್ಥಾನದ ಆಡಳಿತ ಮಂಡಳಿ ಯಾವುದೇ ಸಮಸ್ಯೆ ಉಂಟಾಗದಂತೆ ಎಲ್ಲಾ ರೀತಿಯ ವ್ಯವಸ್ಥೆ ಕೈಗೊಂಡಿದ್ದರು. ಈ ಸಂದರ್ಭದಲ್ಲಿ ಎಸ್.ಓ.ಚಿನ್ನೋಬಯ್ಯ, ಈ.ಅಂಜಿನಪ್ಪ, ಎನ್.ಎಂ.ಲಿಂಗಪ್ಪ, ರಾಮಣ್ಣ, ಅಂಜಿನಮೂರ್ತಿ, ಮೂರ್ತಿ, ಮಾರುತಿ, ಮಂಜಪ್ಪ, ಕಾಲುವೇಹಳ್ಳಿ ರಾಘವೇಂದ್ರ ಮುಂತಾದವರು ಭಾಗವಹಿಸಿದ್ದರು.

# ಗ್ರಾಪಂ ಸದಸ್ಯನ ಬಂಧನಕ್ಕೆ ಆಗ್ರಹ



» ಚಳ್ಳಕೆರೆ

ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿಯ ಎಂ.ಮಂಜುನಾಥ ಎಂಬ ದಲಿತ ಮುಖಂಡರ ಮೇಲೆ ಹಲ್ಲೆ ನಡೆಸಿ ಜಾತಿನಿಂದನೆ ಮಾಡಿದ ಕೋನಸಾಗರ ಗ್ರಾಮ ಪಂಚಾಯಿತಿ ಸದಸ್ಯ ಎಂ.ರೇವಣ್ಣನನ್ನು ಕೂಡಲೇ ಬಂಧಿಸಬೇಕೆಂದು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮೇಲ್ವಿಚಾರಣೆ ಬಲವರ್ಧನ ಸಮಿತಿ ಒತ್ತಾಯಿಸಿ ತಹಶೀಲ್ದಾರ್‌ಗೆ ಮನವಿ ನೀಡಿದೆ.

ಸಮಿತಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಶಿವಣ್ಣ ಈ ಬಗ್ಗೆ ಮಾಹಿತಿ ನೀಡಿ, ಫೆ.6ರ ಮಂಗಳವಾರ ಮಧ್ಯಾಹ್ನ 12.30ಕ್ಕೆ ನಗರದ ಲೋಕೋಪಯೋಗಿ ಕಚೇರಿ ಬಳಿ ಎಂ.ರೇವಣ್ಣ ಮತ್ತು ಮಂಜುನಾಥ ಮದ್ಯೆ ಹಣಕಾಸಿನ ವ್ಯವಹಾರವಿದ್ದು, ಮಂಜುನಾಥ ರೇವಣ್ಣನನ್ನು ಹಣ ಕೊಡುವಂತೆ ಕೇಳಿದಾಗ ರೇವಣ್ಣ ಜಾತಿನಿಂದನೆ ಮಾಡಿ ಹಲ್ಲೆ ನಡೆಸಿದ್ದ ಈ ಬಗ್ಗೆ ಅಂದು ಸಂಜೆ ಚಳ್ಳಕೆರೆ ಪೊಲೀಸರಿಗೆ ದೂರು ನೀಡಿದ್ದರು. ಪೊಲೀಸರು ಎಂ.ರೇವಣ್ಣನ ವಿರುದ್ಧ ಪ್ರಕರಣ ದಾಖಲಿಸಿ ಐದು ದಿನಗಳು ಕಳೆದರೂ ಇನ್ನೂ ಆರೋಪಿಯ ಬಂಧನವಾಗಿಲ್ಲ. ಕೂಡಲೇ ಆತನನ್ನು ಬಂಧಿಸುವಂತೆ ಮನವಿ ಮೂಲಕ ಒತ್ತಾಯಿಸಿದ್ದಾರೆ.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ಜಾತಿನಿಂದನೇ ಆರೋಪಕ್ಕೆ ಸಂಬಂಧಪಟ್ಟಂತೆ ಚಳ್ಳಕೆರೆ ಪೊಲೀಸರು ಆರೋಪಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಕೂಡಲೇ ಆರೋಪಿಯನ್ನು ಬಂಧಿಸುವಂತೆ ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡುವುದಾಗಿ ತಿಳಿಸಿದರು.

ಮಹಿಳಾ ಘಟಕ ಅಧ್ಯಕ್ಷೆ ಎಸ್.ಮಂಜುಳಮ್ಮ, ತಾಲೂಕು ಕಾರ್ಯದರ್ಶಿ ನಿಜಲಿಂಗಪ್ಪ, ಪ್ರಧಾನ ಕಾರ್ಯದರ್ಶಿ ಎನ್. ಕುಶ, ವಿಡುಪನಕುಂಟೆ ಮೂರ್ತಿ, ಜೆ.ವೆಂಕಟೇಶ, ಎನ್.ಎಸ್.ಅನಂತ, ಸಿ.ವಿ. ಭದ್ರಿ, ಚನ್ನಪ್ಪ, ಸುಧಮ್ಮ, ಸಿ.ಅನ್ನಪೂರ್ಣಮ್ಮ, ಶಾಂತಮ್ಮ, ಗೌರಮ್ಮ, ಗೀತಮ್ಮ, ಓ.ಲಕ್ಷ್ಮಿದೇವಿ, ಮೂಡಲಗಿರಿಯಪ್ಪ, ವೆಂಕಟೇಶ್ ಮುಂತಾದವರು ಮನವಿ ಅರ್ಪಿಸಿದರು.

# ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ನಡೆಯುವ ಪ್ರತಿಭಟನೆಗೆ ಸಿಪಿಐ ಬೆಂಬಲ

» ಚಿತ್ರದುರ್ಗ

ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗೂ ಕಾರ್ಮಿಕರು, ದುಡಿಯುವ ವರ್ಗದವರಿಗೆ ಶೋಷಣೆಯಾಗುತ್ತಿರುವುದನ್ನು ವಿರೋಧಿಸಿ ಎ.ಐ.ಟಿ.ಯು.ಸಿ. ಸಿ.ಐ.ಟಿ.ಯು.

ಐ.ಎನ್.ಟಿ.ಯು.ಸಿ. ಎ.ಐ.ಸಿ.ಸಿ.ಟಿ.ಯು. ವಿವಿಧ ಸಂಘಟನೆಗಳು ಫೆ.16 ರಂದು ಬೃಹತ್ ಪ್ರತಿಭಟನೆಗೆ ಕರೆ ನೀಡಿರುವುದರಿಂದ ಜಿಲ್ಲೆಯಾದ್ಯಂತ ಅಂದು ಪ್ರತಿಭಟನೆ ನಡೆಸಲಾಗುವುದೆಂದು ಸಿ.ಐ.ಟಿ.ಯು.ಜಿಲ್ಲಾ ಸಹ ಸಂಚಾಲಕ ಸಿ.ಕೆ.ಗೌಸ್‌ಪೀರ್ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಮಿಕ ವರ್ಗದವರಿಗೆ ತಿಂಗಳಿಗೆ 31 ಸಾವಿರದ ಐದು ನೂರು ರೂ.ವೇತನ ನಿಗಧಿಪಡಿಸಬೇಕು. ನೋಟ್ ಬ್ಯಾನ್ ಒಂದು ಕಡೆಯಾದರೆ ಜಿ.ಎಸ್.ಟಿ. ಹೆಚ್ಚಿಸಿ ಬಡವರ ಮೇಲೆ ಕೇಂದ್ರ ಸರ್ಕಾರ ಬರೆ ಎಳೆಯುತ್ತಿದೆ. ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ 98 ಕೋಟಿ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಆರ್ಥಿಕ ಅಸಮಾನತೆ ತಾಂಡವವಾಡುತ್ತಿದೆ. ಒಟ್ಟಾರೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜನ ವಿರೋಧಿ ನೀತಿ ಅನುಸರಿಸುತ್ತಿರುವುದನ್ನು ಖಂಡಿಸಿ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿಯೂ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.ದಿನನಿತ್ಯ ಬಳಸುವ ಅಡುಗೆ ಪದಾರ್ಥಗಳ ಬೆಲೆ ಗಗನಕ್ಕೇರಿದೆ. ಹಾಲು, ಹಣ್ಣು, ಮೊಟ್ಟೆ ಬಡವರ ಕೈಗೆ ಸಿಗದಂತಾಗಿದೆ. ಸಮಾನ ಕೆಲಸಕ್ಕೆ ಸಮಾನ ವೇತನ ಕೊಡಬೇಕು. ರೈಲ್ವೆ ಖಾಸಗಿಯವರಿಗೆ ಮಾರಾಟವಾಗುತ್ತಿದೆ.

## ಪ್ರಮುಖ ಸುದ್ದಿ

# ಪಾತಲಿಂಗೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಸಭೆ



» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿಯಲ್ಲಿ ಶ್ರೀಪಾತಲಿಂಗೇಶ್ವರಸ್ವಾಮಿಯ ಭವ್ಯವಾದ ಜಾತ್ರಾಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಿದ್ದು,ದೇವಸ್ಥಾನದಗೋರವಿನಕೆರೆ ವಂಶಸ್ಥರು ಹಾಗೂ ಎಲ್ಲಾ ಭಕ್ತರು ಹಾಗೂ ಸೇವಾ ಕಾರ್ಯಕರ್ತರು ಸಹಕಾರ ನೀಡುವಂತೆ ಶ್ರೀಪಾತಲಿಂಗೇಶ್ವರಸ್ವಾಮಿ ಸಮಿತಿ ಅಧ್ಯಕ್ಷ ಆರ್.ಮಲ್ಲಯ್ಯ ಮನವಿ ಮಾಡಿದರು.

ನಗರದ ಪ್ರವಾಸಿಮಂದಿರದಲ್ಲಿ ಶ್ರೀಪಾತಲಿಂಗೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಗೆ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷವೂ ಶ್ರೀಸ್ವಾಮಿಯ ಜಾತ್ರೆಯನ್ನು ಯಾವುದೇ ಲೋಪವಿಲ್ಲದೆ ಎಲ್ಲರ ಸಹಕಾರದಿಂದ ಅದ್ದೂರಿಯಾಗಿ ನಡೆಸಲಾಗುತ್ತದೆ. ಈ ಬಾರಿಯೂ ಸಹ ಎಲ್ಲರೂ ಸಹಕಾರ ನೀಡಿದರೆ ಸ್ವಾಮಿಯ ಜಾತ್ರಾ ಉತ್ಸವವನ್ನು ಇನ್ನು ಹೆಚ್ಚು ವಿಜೃಂಭಣೆಯಿಂದ ನಡೆಸಬಹುದಾಗಿದೆ ಎಂದರು.ಕಾರ್ಯದರ್ಶಿ ಕರೀಕೆರೆ ನಾಗರಾಜು ಮಾತನಾಡಿ, ಶ್ರೀಸ್ವಾಮಿಯ ಜಾತ್ರೆ ಯಶಸ್ವಿಗೊಳಿಸಲು ಗೊರವಿನಕೆರೆ ವಂಶಸ್ಥರು ಹಾಗೂ ಭಕ್ತರು ದೇವಸ್ಥಾನದ ಆಡಳಿತ ಮಂಡಳಿಯೊಂದಿಗೆ ಸಹಕಾರ ನೀಡುವುದಲ್ಲದೆ, ಜಾತ್ರಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ಪಡೆದು ಜಾತ್ರಾ ಸಮಿತಿಯೊಂದಿಗೆ ಪರಸ್ಪರ ಚರ್ಚೆ ನಡೆಸಿ ಶ್ರೀಪಾತಲಿಂಗೇಶ್ವರಸ್ವಾಮಿಯ ಜಾತ್ರೆಯನ್ನು ಎರಡು ದಿನಗಳ ಕಾಲ ಅದ್ದೂರಿಯಾಗಿ ನಡೆಸಲು ತೀರ್ಮಾನಿಸಲಾಗಿದೆ.

ಮಾರ್ಚ್ 16ರಂದು ಶ್ರೀಸ್ವಾಮಿಯ ಭವ್ಯವಾದ ಮೆರವಣಿಗೆಯೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ನಡೆಸಿ ದೇವಸ್ಥಾನಕ್ಕೆ ಕರೆತರಲಾಗುವುದು. ನಂತರ ದೇವಸ್ಥಾನದಲ್ಲಿ ಶ್ರೀಸ್ವಾಮಿಗೆ ಪೂಜಾ ವಿಧಿವಿಧಾನಗಳನ್ನು ನಡೆಸಿ ಆಗಮಿಸಿದ ಭಕ್ತಾಧಿಗಳಿಗೆ ಪ್ರಸಾದ ವ್ಯವಸ್ಥೆ ಮಾಡಲಾಗುವುದು. ಮಾರ್ಚ್ 17ರಂದು ಶ್ರೀಸ್ವಾಮಿಗೆ ರುದ್ರಾಭಿಷೇಕ, ಎಲೆ ಪೂಜೆ, ವಿಶೇಷ ಅಲಂಕಾರದೊಂದಿಗೆ ಪ್ರಸಾದ ವಿತರಣೆ ಕಾರ್ಯಕ್ರಮವನ್ನು ನಡೆಸಲಾಗುವುದು. ಜಾತ್ರೆಗೆ ಎಲ್ಲಾ ಸದ್ಭಕ್ತರು ಸಕಾಲದಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

ಪೂರ್ವಬಾವಿ ಸಭೆಯಲ್ಲಿ ಉಪಾಧ್ಯಕ್ಷ ತಿಪ್ಪೇಸ್ವಾಮಿ, ಖಜಾಂಚಿ ವೇದಮೂರ್ತಿ, ನಿರ್ದೇಶಕರಾದ ಆರ್.ನಿಂಗಪ್ಪ, ಪ್ರಕಾಶ್, ನಗರಂಗೆರೆ ಮಹೇಶ್, ಮಂಜುನಾಥ, ನಂಜುಡಪ್ಪ, ಜಯಕುಮಾರ್, ಶಿವಣ್ಣ, ನಾಗರಾಜು, ನಿಂಗಣ್ಣ, ಚಂದ್ರಣ್ಣ ಮುಂತಾದವರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಪೋಷಕರು ತಪ್ಪದೆ ಮಕ್ಕಳನ್ನು ಶಾಲೆಗೆ ಕಳುಹಿಸಿ: ರವಿಕುಮಾರ್



» **ನಾಯಕನಹಟ್ಟಿ**

ಪೋಷಕರು ತಪ್ಪದೆ ಮಕ್ಕಳನ್ನು ಶಾಲೆಗೆ ಕಳುಹಿಸಿ ಎಂದು 9ನೇ ವಾರ್ಡ್‌ನ ಪಟ್ಟಣ ಪಂಚಾಯಿತಿ ಸದಸ್ಯ ರವಿಕುಮಾರ್ ಮನವಿ ಮಾಡಿಕೊಂಡರು. ಪಟ್ಟಣದ ಸರ್ಕಾರಿ ಕ್ಲಸ್ಟರ್ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು ಮಕ್ಕಳು ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಬೇಕು. ಮತ್ತು ಮಕ್ಕಳಿಗೆ ಸರಿಯಾದ ಶಿಕ್ಷಣವನ್ನು ಕೊಡಿ ಎಂದು ಶಾಲೆ ಶಿಕ್ಷಕರುಗಳಿಗೆ ಕಿವಿ ಮಾತು ಹೇಳಿದರು. ನಂತರ ಮಾತನಾಡಿ ಅವರು ತಮ್ಮ ಮಕ್ಕಳಿಗೆ ಮೊದಲು ವಿದ್ಯಾಭ್ಯಾಸ ಕೊಡಿಸುವ ಮೂಲಕ ಅವರು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳುವಂತೆ ಮಾಡಿ ಎಂದು ಕರೆ ನೀಡಿದರು. ಗ್ರಾಮೀಣ ಭಾಗದ ಅನೇಕ ಜನರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸುವುದರ ಬದಲು ತಮ್ಮ ಜೊತೆ ಕೂಲಿ ಮಾಡಲು ಕರೆದೊಯ್ಯುತ್ತಾರೆ. ಇದರಿಂದ ಮಕ್ಕಳ ಭವಿಷ್ಯ ಹಾಳಾಗುತ್ತದೆ ಎಂದರು. ಮಕ್ಕಳಿಗೆ ಉತ್ತಮ ಮತ್ತು ಗುಣಮಟ್ಟದ ಶಿಕ್ಷಣ ಕೊಡಿಸುವುದು ಪೋಷಕರ ಜವಬ್ದಾರಿಯಾಗಿರುತ್ತದೆ. ಸಮಾಜದಲ್ಲಿ ಮುಖ್ಯ ವಾಹಿನಿಗೆ ಬರಬೇಕಾದರೆ ಅವರು ಶಿಕ್ಷಣ ಕಲಿಸುವುದು ಅತ್ಯವಶ್ಯಕವಿದೆ ಎಂದರು. ಹಟ್ಟಿ ಮಲ್ಲಪ್ಪ ನಾಯಕ ಸಂಘದ ಅಧ್ಯಕ್ಷರಾದ ಯತ್ನಹಟ್ಟಿ ಗೌಡರು ಪಟೇಲ್ ಜಿ.ಎಂ.ತಿಪ್ಪೇಸ್ವಾಮಿ ಮಾತನಾಡಿ ಜಿಲ್ಲಾ ಉಸ್ತುವಾರಿ ಮಂತ್ರಿಗಳ ಹತ್ತಿರ ಮಾತನಾಡಿ ಈ ಶಾಲೆಗೆ 10 ಕೊಠಡಿ ಕೊಡುಸಿವುಂತಹ ಕೆಲಸ ಮಾಡುತ್ತೇನೆ ಎಂದರು. ಇದೇ ಶಾಲೆಯಲ್ಲಿ ಓದಿದಂತವರು ಉನ್ನತ ಮಟ್ಟದ ಅಧಿಕಾರದಲ್ಲಿದ್ದಾರೆ. ಆದ್ದರಿಂದ ಶಿಕ್ಷಣಕ್ಕೆ ಹೆಚ್ಚು ಪ್ರೋತ್ಸಹ ನೀಡಬೇಕು. ಮಕ್ಕಳು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.ಪಟ್ಟಣ ಪಂಚಾಯಿತಿ ಸದಸ್ಯೆ 8ನೇ ವಾರ್ಡ್‌ನ ಮಂಜುಳ ಶ್ರೀಕಾಂತ್ ಮಾತನಾಡಿ ಮಕ್ಕಳು ಮೊಬೈಲ್ ಕಡೆ ಹೆಚ್ಚಿನ ಗಮನ ಹರಿಸದೆ ಓದಿನ ಕಡೆ ಹೆಚ್ಚು ಆಸಕ್ತಿ ಕೊಡಿ, ಪೋಷಕರು ಮಕ್ಕಳನ್ನು ಶಾಲೆಗೆ ಕಳುಹಿಸಿ ಎಂದು ಮನವಿ ಮಾಡಿಕೊಂಡರು. ಚಿಕ್ಕ ಮಕ್ಕಳಿಗೆ ಮೊಬೈಲ್ ಕೊಡಬೇಡಿ, ಮೊಬೈಲ್ ಕೊಟ್ಟರೆ ನಿಮ್ಮ ಮಕ್ಕಳಿಗೆ ಕಣ್ಣಿಗೆ ತೊಂದರೆಯಾಗುತ್ತದೆ. ಎಚ್ಚರವಹಿಸಿ ಎಂದು ಅವರು ಹೇಳಿದರು, ಮಕ್ಕಳಿಗಾಗಿ ಆಸ್ತಿ ಕೂಡಿಡುವ ಬದಲು ಮಕ್ಕಳನ್ನೆ ಆಸ್ತಿಯನ್ನಾಗಿ ಮಾಡಬೇಕು, ವಿದ್ಯಾರ್ಥಿಗಳು ತಾನು ಕಲಿತ ಶಾಲೆ ಹಾಗೂ ಕಲಿಸಿದ ಗುರುಗಳನ್ನು ಗೌರವಿಸಿ ಜೀವನುದದ್ದಕು ಗುರುಗಳನ್ನು ಗೌರವಿಸಿ ಸ್ಮರಿಸುತ್ತಾನೋ ಅವರ ಬದುಕು ಉಜ್ವಲವಾಗುತ್ತದೆ. ಮಕ್ಕಳಿಗೆ ನೀಡುವ ಶಿಕ್ಷಣ ಗುಣಮಟ್ಟದಿಂದ ಕೂಡಿರಬೇಕು ಎಂದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಎಸ್.ಟಿ.ಎಂ.ಸಿ ಅಧ್ಯಕ್ಷೆ ಸುಮಲತಾ.ಪಿ, ಉಪಾಧ್ಯಕ್ಷ ಟಿ.ತಿಪ್ಪೇಸ್ವಾಮಿ, ಪಟ್ಟಣ ಪಂಚಾಯತಿ ಸದಸ್ಯೆ ಸರ್ವಮಂಗಳ ಉಮಾಪತಿ, ಸುನೀತ ಮುದಿಯಪ್ಪ, ಪಾಪಮ್ಮ ಮಾಜಿ ಪಟ್ಟಣ ಪಂಚಾಯಿತಿ ಸದಸ್ಯೆ ಮನ್ಸೂರ್, ರುವಾರಿಗಳಾದ ಮಾರುತಿ, ಶ್ರೀಕಾಂತ್, ಈಶ್ವರಪ್ಪ, ಪಾಪಣ್ಣ, ಓಬಣ್ಣ, ಪಿ.ಟಿ.ತಿಪ್ಪೇಸ್ವಾಮಿ, ಸುಜಾತ, ಪಾಪಮ್ಮ, ಸದಾಶಿವ, ಮಾದರಿ ಶಾಲೆಯ ಮುಖ್ಯೋಪಾಧ್ಯಾಯನಿ ಇಂದಿರಮ್ಮ, ಶಾಲೆಯ ಶಿಕ್ಷಕರು, ಶಿಕ್ಷಕಿಯರು, ಪೋಷಕರು, ಮಕ್ಕಳು, ಹಾಗೂ ಇನ್ನೂ ಇತರರು ಇದ್ದರು.

## ಚನ್ನಗಿರಿ ಪ್ರವಾಸಿ ಮಂದಿರದಲ್ಲಿ ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

» **ದಾವಣಗೆರೆ**

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಚನ್ನಗಿರಿ ತಾಲ್ಲೂಕಿನ ಪ್ರವಾಸಿ ಮಂದಿರದಲ್ಲಿ ಫೆ.14 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕಾರಿಸುವರು.ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟಿದಲ್ಲಿ ಅಂತಹ ದೂರುಗಳನ್ನು ಸಲ್ಲಿಸಬಹುದೆಂದು ತಿಳಿಸಿದ್ದಾರೆ.

## ಬೃಹತ್ ಉದ್ಯೋಗ ಮೇಳ-2024

» **ದಾವಣಗೆರೆ**

ಕರ್ನಾಟಕ ಕೌಶಲ್ಯ ಅಭಿವೃದ್ದಿ ನಿಗಮದಿಂದ ಫೆ.26 ಮತ್ತು 27 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಉದ್ಯೋಗಾಕಾಂಕ್ಷಿಗಳಿಗೆ ವಿದ್ಯಾರ್ಹತೆಗೆ ಅನುಗುಣವಾಗಿ ಉದ್ಯೋಗಾವಕಾಶವನ್ನು ಒದಗಿಸುವ ಸಂಬಂಧ ಈ ಮೇಳವನ್ನು ಆಯೋಜಿಸಲಾಗಿದೆ. ನೋಂದಾವಣೆಯಾಗಲು ವೆಬ್‌ಸೈಟ್;https;// skillconnect.kaushalkar.com ಮೂಲಕ ನೊಂದಾಯಿಸಿ ಉದ್ಯೋಗಾಕಾಂಕ್ಷಿಗಳು ಇದರ ಸದುಪಯೋಗ ಪಡೆಯಲು ಜಿಲ್ಲಾಧಿಕಾರಿ ವೆಂಕಟೇಶ್ ತಿಳಿಸಿದ್ದಾರೆ.

### ಚಳ್ಳಕೆರೆ ಎಪಿಎಂಸಿ ಮಾರುಕಟ್ಟೆ ಗೇಟ್‌ಗೆ ಬೀಗ ಹಾಕಿದ ರೈತರು

# ಚಳ್ಳಕೆರೆ ಹುಣಸೆಹಣ್ಣು ಮಾರುಕಟ್ಟೆಯಲ್ಲಿ ಮೋಸ

» **ಚಳ್ಳಕೆರೆ**

ರಾಜ್ಯದಲ್ಲೇಉತ್ತಮವಹಿವಾಟುವುಳ್ಳಕೆಲವೇ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಚಳ್ಳಕೆರೆ ಮಾರುಕಟ್ಟೆಯೂ ಒಂದಾಗಿದೆ. ಬಳ್ಳಾರಿ, ಹುಬ್ಬಳಿ, ದಾವಣಗೆರೆ, ಚಿತ್ರದುರ್ಗದಂತಹ ಪ್ರಖ್ಯಾತ ಮಾರುಕಟ್ಟೆಗಳಿಗೆ ಸವಾಲೊಡ್ಡುವಂತೆ ಚಳ್ಳಕೆರೆ ಮಾರುಕಟ್ಟೆ ವ್ಯವಹಾರವಗಳು ಸಹ ಉತ್ತಮವಾಗಿ ನಡೆಯುತ್ತಿದ್ದು, ನೆರೆಯ ಆಂಧ್ರಪ್ರದೇಶವೂ ಸೇರಿದಂತೆ ರಾಜ್ಯದ ನೂರಾರು ಶೇಂಗಾ, ಹುಣಸೆಹಣ್ಣು, ಒಣಮೆಣಸೀನಕಾಯಿ, ಈರುಳ್ಳಿ ಬೆಳೆಯುವ ರೈತರು ಹಾಗೂ ಮಾರಾಟಗಾರರು ಬರುತ್ತಾರೆ.

ಚಳ್ಳಕೆರೆ ಮಾರುಕಟ್ಟೆಯಲ್ಲಿ ಉತ್ತಮ ದರ ಹಾಗೂ ಅಳತೆಯಲ್ಲಿ ಯಾವುದೇ ಮೋಸವಿಲ್ಲವೆಂದು ಬಾವಿಸಿದ ನೂರಾರು ರೈತರು ಇಲ್ಲಿನ ಮಾರುಕಟ್ಟೆಗೆ ಬರುತ್ತಾರೆ. ಬೇರೆ ಮಾರುಕಟ್ಟೆಗೆ ಹೊಲಿಸಿದಲ್ಲಿ ಇಲ್ಲಿ ಎಲ್ಲವೂ ಸುಲಭವಾಗುವುದು ಎಂಬ ನಂಬಿಕೆ ಇವರದ್ದು.

ಆದರೆ, ಭಾನುವಾರ ಮಾತ್ರ ಚಳ್ಳಕೆರೆ ಮಾರುಕಟ್ಟೆಗೆ ಆಗಮಿಸಿ ರೈತರು ತಾವು ಬೆಳೆದು ತಂದ ಶೇಂಗಾ, ಹುಣಸೆಹಣ್ಣು ದರಗಳಿಗೆ ಬೇರೆ ಮಾರುಕಟ್ಟೆಗಿಂತ ಕಡಿಮೆ ದರ ನಮೂದಿಸಿದ ಹಿನ್ನೆಲೆಯಲ್ಲಿ



ನಮಗೆ ಇಲ್ಲಿನ ಮಾರುಕಟ್ಟೆಯಲ್ಲಿ ದರ ಹಾಗೂ ತೂಕದಲ್ಲಿ ಅನ್ಯಾಯ ಮಾಡಲಾಗುತ್ತಿದೆ ಎಂದು ಆರೋಪಿಸಿ ಮಾರುಕಟ್ಟೆಗೆ ಗೇಟ್‌ಗೆ ಬೀಗ ಹಾಕಿ ದಿಢೀರ್ ಪ್ರತಿಭಟನೆ ನಡೆಸಿದರು.

ಒಮ್ಮಿಂದೊಮ್ಮೆಲ್ಲೇ ರೈತರು ಹಾಗೂ ಮಾರಾಟಗಾರರು ಮಾರುಕಟ್ಟೆಗೆ ಯಾರೂ ಪ್ರವೇಶ ಮಾಡದಂತೆ ಗೇಟ್ ಮುಂದೆ ಪ್ರತಿಭಟನೆ ನಡೆಸಿದಾಗ ಇಡೀ ವಾತಾವಣವೇ ಅಯೋಮಯವಾಗಿದ್ದು, ಮಾರುಕಟ್ಟೆ ಅಧಿಕಾರಿಗಳು ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೇ ಮೌನವಹಿಸಿದ್ದು ರೈತರ ಆಕ್ರೋಶಕ್ಕೆ ಕಾರಣವಾಗಿತ್ತು. ಬಳ್ಳಾರಿ, ದಾವಣಗೆರೆ, ಚಿತ್ರದುರ್ಗ ಮಾರುಕಟ್ಟೆಗಳಲ್ಲಿ ಹುಣಸೆಹಣ್ಣಿನ ದರ ಉತ್ತಮ ಗುಣಮಟ್ಟದ್ದು 20 ಸಾವಿರವಿದ್ದು ಇಲ್ಲಿ 10ರಿಂದ12 ಸಾವಿರಕ್ಕೆ ತೆಗೆದುಕೊಳ್ಳುವುದಾಗಿ ತಿಳಿಸಿದಾಗ ರೈತರ ಅಸಹನೆ ಕಟ್ಟೆ ಒಡೆಯಿತು.

ಅತಿಕಡಿಮೆ ಬೆಲೆ ನಮೂದಿಸಿ ಖರೀದಿಸಲು ಮುಂದಾದಾಗ ರೈತರು ಆಕ್ರೋಶಗೊಂಡರು. ನಮ್ಮ ಬೆಳೆಗೆ ಹೆಚ್ಚು ಬೆಲೆ ಬೇರೆ ಮಾರುಕಟ್ಟೆಗಳಲ್ಲಿ ದೊರೆತರೆ ಇಲ್ಲಿ ಕಡಿಮೆ ದರ ನಮೂದಿಸಲು ಕಾರಣವೇನು, ಇಲ್ಲಿ ಮಧ್ಯವರ್ತಿಗಳ ಹಾವಳಿಯಿಂದ ಪಿತೂರಿ ನಡೆಯುತ್ತಿದೆ ಎಂದು ಆರೋಪಿಸಿ ಬೀಗಜಡಿದು ಪ್ರತಿಭಟನೆ ನಡೆಸಿದರು.

ಸುದ್ದಿ ತಿಳಿದ ಕೂಡಲೇ ಪಿಎಸ್‌ಐ ಕೆ.ಸತೀಶ್‌ನಾಯ್ಕ ಮತ್ತು ಸಿಬ್ಬಂದಿ ವರ್ಗ ಸ್ಥಳಕ್ಕೆ ಭೇಟಿ ನೀಡಿ ರೈತರು ಮತ್ತು ಮಾರುಕಟ್ಟೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು. ಇದೇ ಸಂದರ್ಭದಲ್ಲಿ ಮಾರುಕಟ್ಟೆ ಅಧಿಕಾರಿಗಳು ಸಹ ಗುಣಮಟ್ಟವನ್ನು ನೋಡಿ ದರ ನಿಗದಿಪಡಿಸಲಾಗುತ್ತದೆ. ಇಲ್ಲಿ ಯಾವುದೇ ಅನ್ಯಾಯವಾಗುವುದಿಲ್ಲ ಎಂದರೂ ಸಹ ರೈತರು ತಮ್ಮ ಅಸಮದಾನ ಮುಂದುವರೆಸಿದರು. ಪೊಲೀಸರ ಮಧ್ಯಪ್ರವೇಶದಿಂದ ಪರಿಸ್ಥಿತಿ ಹತೋಟಿಗೆ ಬಂದಿತಲ್ಲದೆ, ಗೇಟೆಗೆ ಹಾಕಿದ್ದ ಬೀಗ ತೆರವುಗೊಳಿಸಿದರು.

# ನಕಲಿ ಕಾರ್ಮಿಕರನ್ನು ಗುರುತಿಸಿ, ಸೌಲಭ್ಯ ಸ್ಥಗಿತಗೊಳಿಸಿ: ಶಾಸಕ ಬಿ.ಜಿ ಗೋವಿಂದಪ್ಪ

» **ಹೊಸದುರ್ಗ**

ಕಾರ್ಮಿಕ ಇಲಾಖೆ ಸುಳ್ಳು ದಾಖಲೆ ನೀಡಿ ನಕಲಿ ಕಾರ್ಡ್ ಮಾಡಿಸಿಕೊಂಡು ಸರಕಾರದ ಸೌಲಭ್ಯ ಪಡೆಯುತ್ತಿರುವವನ್ನು ಈ ಕ್ಷಣದಿಂದಲೇ ಪತ್ತೆಹಚ್ಚಿ, ಸೌಲಭ್ಯವನ್ನು ನಿಲ್ಲಿಸಿ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಅವರು ಕಾರ್ಮಿಕ ನಿರೀಕ್ಷಕರಿಗೆ ಸೂಚಿಸಿದರು.

ಪಟ್ಟಣದ ತಾಲೂಕು ಪಂಚಾಯ್ತಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಮತ್ತು ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಶನಿವಾರ ಉಚಿತ ಲ್ಯಾಪ್ ಟ್ಯಾಪ್ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಕಾರ್ಮಿಕ ಇಲಾಖೆಯಲ್ಲಿ ಬಹಳಷ್ಟು ಅವ್ಯವಹಾರ ನಡೆದಿವೆ. ಇದರಿಂದ ಹಿಂದಿನ ಕಾರ್ಮಿಕ ನಿರೀಕ್ಷಕಿ ಗಿರಿತಿಮ್ಮಕ್ಕ ಭಾರೀ ಒತ್ತಡದಿಂದ ಮರಣ ಹೊಂದಿದರೇನೋ ಎನ್ನಿಸುಟ್ಟಿದೆ. ಯಾವಾಗ ಕರೆ ಮಾಡಿದರೂ, ಅಳುತ್ತಲೇ ಮಾತನಾಡುತ್ತಿದ್ದರು. ಕಾರ್ಮಿಕ ಇಲಾಖೆಯ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಿಗಬೇಕು. ಇಲಾಖೆಯಲ್ಲಿ ಅಕ್ರಮ ನಡೆಯದಂತೆ ಪರಿಶೀಲಿಸಿ, ನೈಜ ಕಟ್ಟಡ ಕಾರ್ಮಿಕರ ಕಲ್ಯಾಣಕ್ಕೆ ಹಣ ಬಳಕೆಯಾಗಬೇಕು. ದೇಶದಲ್ಲಿ ಮೊದಲಿಗೆ ಕಾರ್ಮಿಕರಿಗೆ ಸಂಬಂಧಿಸಿದಂತಹ ಯೋಜನೆಗಳನ್ನು ಮೊದಲಿಗೆ ಕೇಂದ್ರ ಸರಕಾರದಲ್ಲಿ ಸಚಿವರಾಗಿದ್ದ ಮಲ್ಲಿಕಾರ್ಜುನ್ ಖರ್ಗೆ ಮಾಡಿದ್ದಾರೆ. ಬಡವರಿಗೆ, ಶ್ರಮಿಕರಿಗೆ ಒಳ್ಳೆಯದನ್ನು ಮಾಡಿದರೆ, ದೇವರು ನಿಮಗೆ ಒಳ್ಳೆಯದನ್ನು ಮಾಡುತ್ತಾನೆ. ಬಡವರಿಗೆ



ಮೋಸ ಮಾಡಿದರೆ, ನಿಮಗೆ ಒಳ್ಳೆಯದಾಗುವುದಿಲ್ಲ ಎಂದು ಕಾರ್ಮಿಕ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ತರಾಟೆಗೆ ತೆಗೆದುಕೊಂಡರು.

ಪ್ರಾಸ್ತಾವಿಕವಾಗಿ ಕಾರ್ಮಿಕ ನಿರೀಕ್ಷಕ ರಾಜಣ್ಣ ಮಾತನಾಡಿ, ಕಾರ್ಮಿಕ ಇಲಾಖೆ ವತಿಯಿಂದ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿದೆ. ಈಗಾಗಲೇ ತಾಲೂಕಿನ ಕಾರ್ಮಿಕರಿಗೆ ಮದುವೆ ಧನ ಸಹಾಯವಾಗಿ 3.31 ಕೋಟಿ ರು., ಹೆರಿಗೆ ಧನ ಸಹಾಯವಾಗಿ 65.50 ಲಕ್ಷ ರು., ತಾಯಿ ಮತ್ತು ಮಗು ಸಹಾಯ ಹಸ್ತ ಧನ ಸಹಾಯ 15.78 ಲಕ್ಷ ರು., ನೀಡಲಾಗಿದೆ. ವೈದ್ಯಕೀಯ ಧನ ಸಹಾಯವನ್ನು ಚಿಕಿತ್ಸಾ ಮೊತ್ತದ ಆಧಾರದ ಅನ್ವಯ ನೀಡಲಾಗುವುದು. ಕಾರ್ಮಿಕರ ಆಯ್ದ 25 ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್ ತಪ್‌ಟಾಪ್ ನೀಡಲಾಗಿದೆ ಎಂದು ತಿಳಿಸಿದರು.

ಕಟ್ಟಡ ಕಾರ್ಮಿಕರಿಗೆ ಗುಂಪು ವಸತಿ ಯೋಜನೆ ಮತ್ತು ಗುಂಪು ಯೋಜನೆಯನ್ನು ಜಾರಿಗೆ ತರಬೇಕು. ಹೊಸದುರ್ಗ ನಗರಕ್ಕೆ ಹೊಂದಿಕೊಂಡಿರುವ ಬೋಕಿಕೆರೆ ಗ್ರಾಮದ ರಿ.ಸ. ನಂ 34 ರಲ್ಲಿ 224 ಎಕರೆ ಸರಕಾರಿ ಗೋಮಾಳ ಇದ್ದು, 8 ರಿಂದ 15 ಎಕರೆ ಪಟ್ಟಣ ವಸತಿ ರಹಿತರ ಮನೆಗಳ ಉದ್ದೇಶಕ್ಕಾಗಿ ಮಂಜೂರಾತಿಯಾಗಿದೆ. ಈ ಪ್ರದೇಶದಲ್ಲಿ ಕಟ್ಟಡ ಕಾರ್ಮಿಕರಿಗೆ ಕಾರ್ಮಿಕರ ಲೇಔಟ್ ನಿರ್ಮಾಣ ಮಾಡಿಕೊಳ್ಳಲು 10 ಎಕರೆ ಭೂಮಿ ಮಂಜೂರು ಮಾಡುವುದರ ಜೊತೆಗೆ ಮನೆ ಕಟ್ಟಿಕೊಳ್ಳಲು ಧನ ಸಹಾಯ ನೀಡುವ ಮೂಲಕ ಕಾರ್ಮಿಕರ ಹಲವು ದಶಕಗಳ ಬೇಡಿಕೆಯನ್ನು ಈಡೇರಿಸಬೇಕು ಎಂದು ಕಾರ್ಮಿಕ ಮುಖಂಡ ಮಹಮದ್ ಶಫಿ ಒತ್ತಾಯಿಸಿದರು. ಈ ವೇಳೆ ತಾಲೂಕು ಕಾರ್ಮಿಕ ನಿರೀಕ್ಷಕರಾದ ರಾಜಣ್ಣ, ಹುಣವಿನಡು ಗ್ರಾ.ಪಂ ಉಪಾಧ್ಯಕ್ಷ ರಘು ಇದ್ದರು.

## ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ಯಾರಂಟಿ ಸಮಾವೇಶ, ಕುಂದುಕೊರತೆಗಳ ನಿವಾರಣೆ ಕ್ರಮ; ಡಿಸಿ

**ದಾವಣಗೆರೆ:**ಸರ್ಕಾರದಮಹತ್ವಕಾಂಕ್ಷೆಯೋಜನೆಗಳಾದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆಯೋಜನೆ ಮಾಡುವ ಮೂಲಕ ಪಲಾನುಭವಿಗಳ ಕುಂದುಕೊರತೆ ನಿವಾರಣೆಗೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈಗಾಗಲೇ ಸಂವಿಧಾನ ಜಾಗೃತಿ ಜಾಥಾ ಅಭಿಯಾನ ನಡೆಯುತ್ತಿದ್ದು ಜಾಥಾ ಸಂಚರಿಸುವ ಗ್ರಾಮ ಪಂಚಾಯಿತಿಗಳಲ್ಲಿಯು ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಹಾಗೂ ಯುವನಿಧಿ ಯೋಜನೆ ಕುರಿತು ಮಾಹಿತಿ ನೀಡಿ ಅವರ ಕುಂದುಕೊರತೆಗಳಿದ್ದಲ್ಲಿ ನಿವಾರಣೆಗೆ ಕ್ರಮವಹಿಸಬೇಕೆಂದರು.

# ಮಕ್ಕಳು ಕಲಿತ ಮೌಲ್ಯ ಶಿಕ್ಷಣ ಪೋಷಕರಿಗೆ ನೆಮ್ಮದಿಗೆ ಸಹಕಾರ: ಸದ್ಗುರು ಪ್ರದೀಪ್



» **ಹೊಸದುರ್ಗ**

ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ಮಕ್ಕಳಿಗೆ ಮೌಲ್ಯಯುತವಾದ ಶಿಕ್ಷಣ ನೀಡುವುದರಿಂದ ಆ ಮಕ್ಕಳು ಮುಂದೆ, ದೇಶದ ಅಭಿವೃದ್ಧಿಗೆ ಸಹಕಾರಿಯಾಗಬಲ್ಲರು. ಅಲ್ಲದೇ, ಪೋಷಕರು ನೆಮ್ಮದಿಯಾಗಿ ಬದುಕಲು ಸಹಾಯ ಮಾಡಬಲ್ಲರು ಎಂದು ಸದ್ಗುರು ಸಂಸ್ಥೆಯ ಮಾಲೀಕ ಯುವ ಉದ್ಯಮಿ ಡಿ.ಎಸ್.ಪ್ರದೀಪ್ ತಿಳಿಸಿದರು.

ತಾಲೂಕಿನ ದೊಡ್ಡ ತೇಕಲವಟ್ಟಿ ಗ್ರಾಮದ ಹೊನ್ನ ಮರಡಿ ಪಬ್ಲಿಕ್ ಸ್ಕೂಲ್ ನಲ್ಲಿ ಶನಿವಾರ ರಾತ್ರಿ ನಡೆದ ಚಿಣ್ಣರ ಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಯಾವುದೇ ಶಾಲೆಗಳಲ್ಲಿ ನುರಿತ ಶಿಕ್ಷಕರ ತಂಡವಿದ್ದರೆ, ಆ ಶಾಲೆಯ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಿ ಮುಂದೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಚೈತನ್ಯ ನೀಡುವರು ಎಂದರು.ಹೊನ್ನಮರಡಿ ಶಾಲೆ ಗ್ರಾಮೀಣ ಪ್ರದೇಶದ ಶಾಲೆಯಾಗಿದ್ದು, ಶಿಕ್ಷಕರ ತಂಡ ಮಕ್ಕಳ ಏಳಿಗೆಗೆ ಶ್ರಮಿಸುತ್ತಿದೆ. ಪೋಷಕರು ತಿಂಗಳಿಗೆ ಒಮ್ಮೆಯಾದರೂ, ತಮ್ಮ ಮಕ್ಕಳ ಶಿಕ್ಷಣದ ಬಗ್ಗೆ ತಿಳಿದುಕೊಳ್ಳಲು ಶಾಲೆಗೆ ಬರಬೇಕು. ಆ ಮಗುವಿನ ಶಿಕ್ಷಣದ ಬುದ್ಧಿಮಟ್ಟ ತಿಳಿಯಬೇಕು. ಪೋಷಕರು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವ ಜೊತೆಗೆ ಆ ಮಗು ಮುಂದೆ ದೊಡ್ಡವನಾಗಿ ಬೆಳೆದ ನಂತರ ತಂದೆ ತಾಯಿ ಕುಟುಂಬವನ್ನ ಗೌರವಿಸುವಂತಹ ಮಗುವಾಗಿ ಬೆಳೆಸಲು ಪ್ರೇರೇಪಿಸಬೇಕು ಎಂದು ಹೇಳಿದರು. ಸಮಾಜ ಸೇವಕ ಗೋಲ್ಡನ್ ವಾಯ್ಸ್ ರಾಘು ಮಾತನಾಡಿ, ನಮ್ಮ ಗುರುಗಳಾದ ಈರಣ್ಣನವರು ಹೊನ್ನುಮರಡ್ಡಿ ಶಾಲೆಯನ್ನು ಕಟ್ಟಿ ಗ್ರಾಮೀಣ ಮಕ್ಕಳ ಬದುಕಿಗೆ ಆಸರೆಯಾಗಿರುವುದು ಅತಿ ಸಂತಸ ತಂದಿದೆ. ಮಕ್ಕಳನ್ನು ನಗರ ಪ್ರದೇಶದ ಶಾಲೆಗಳಿಗೆ ಸೇರಿಸದೆ ಅತ್ಯಂತ ಕ್ರಿಯಾಶೀಲ ಶಿಕ್ಷಣದ ಬದುಕು ಕಟ್ಟಿ ಕೊಡುವ ನುರಿತಾ ಶಿಕ್ಷಕರು ಇಲ್ಲಿ ಇರುವುದರಿಂದ ಇಲ್ಲಿ ಎಲ್ಲಾ ಮಕ್ಕಳಿಗೂ ಉತ್ತಮ ಶಿಕ್ಷಣ ಸಿಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಹೊನ್ನಮ್ಮರಡಿ ಶಾಲೆಯ ಆಡಳಿತಾಧಿಕಾರಿ, ಪ್ರಾಚಾರ್ಯ ನಾಗರಾಜ್, ತಾಲೂಕು ಆಡಳಿತ ವೈದ್ಯಾಧಿಕಾರಿ ರಾಘವೇಂದ್ರ ಪ್ರಸಾದ್, ಗ್ರಾಪಂ ಉಪಾಧ್ಯಕ್ಷ ನಾಗರಾಜ್ ಇಸಿಒ ಯತೀಶ್ ಕುಮಾರ್, ಶಿಕ್ಷಕರಾದ ಕವಿತಾ, ಭುವನೇಶ್ವರಿ, ಚೈತ್ರ, ಜ್ಯೋತಿ, ಅರ್ಪಿತಾ ಮುಖಂಡರಾದ ಸುಬ್ಬಣ್ಣ ಮತ್ತು ಸಮಾಜ ಸೇವಕ ತುಂಬಿನಕೆರೆ ಬಸವರಾಜ್ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ನೂರಾರು ವಿದ್ಯಾರ್ಥಿಗಳಿದ್ದರು.

**ಪ್ರಮುಖ ಸುದ್ದಿ**

# ಗ್ರಾಮ ಆರೋಗ್ಯ ಕಾರ್ಯಕ್ರಮಗಳ ಕುರಿತು ಅಧ್ಯಯನ ಪ್ರವಾಸ

» **ದಾವಣಗೆರೆ**

ಹರಿಹರ ತಾಲ್ಲೂಕಿನ ಕುಣೆಬೆಳಕೆರೆ ಗ್ರಾಮ ಪಂಚಾಯಿತಿಯಲ್ಲಿ ಹಾಗೂ ದಾವಣಗೆರೆ ತಾಲ್ಲೂಕಿನ ಮುದಹದಡಿ ಗ್ರಾಮ ಪಂಚಾಯಿತಿಯಲ್ಲಿ ಶುಕ್ರವಾರ ಕೆಹೆಚ್‌ಪಿಟಿ ರಾಜ್ಯ ತಂಡದ ವತಿಯಿಂದ ಗ್ರಾಮ ಆರೋಗ್ಯ ಕಾರ್ಯಕ್ರಮಗಳ ಚಟುವಟಿಕೆಗಳ ಕುರಿತು ಕಲಿಕಾ ಪ್ರವಾಸ ಹಾಗೂ ಅಧ್ಯಯನ ನಡೆಸಲಾಯಿತು.

ಹರಿಹರ ತಾಲ್ಲೂಕಿನ ಕುಣೆಬೆಳಕೆರೆ ಗ್ರಾಮ ಪಂಚಾಯಿತಿಯಲ್ಲಿ ಗ್ರಾಮ ಪಂಚಾಯತ್ ಕಾರ್ಯಪಡೆ ಸಭೆ ವೀಕ್ಷಣೆ, ಕ್ರಿಯಾ ಯೋಜನೆ ಮಾದರಿ, ಸಭೆಯಲ್ಲಿ ನಡೆಸುವ ಚರ್ಚೆಗಳ ಕಲಾಪದ ಬಗ್ಗೆ ಅಧ್ಯಯನ ತಂಡ ಮಾಹಿತಿ ಪಡೆಯಿತು.

ಗ್ರಾಮ ಆರೋಗ್ಯ ಕಾರ್ಯಕ್ರಮ ಕುರಿತಾಗಿ ಪ್ರಾ.ಆ.ಕೇಂದ್ರ ವೈದ್ಯಾಧಿಕಾರಿ ಡಾ ನವ್ಯ, ಸೌಮ್ಯ ರೆಡ್ಡಿ, ಅಕ್ಷತಾ ಅವರು ಆರೋಗ್ಯ ಜಾಗೃತಿ ಕಾರ್ಯಕ್ರಮ ರೂಪು ರೇಷೆ ಕುರಿತಾಗಿ ಮಾಹಿತಿ ನೀಡಿದರು.

ಕುಣೆಬೆಳಕೆರೆ ಗ್ರಾಮ ಪಂಚಾಯತ್ ಕಾರ್ಯಪಡೆ ವತಿಯಿಂದ ಎರಡು ವರ್ಷಗಳಿಂದ ಗ್ರಾಮ ಆರೋಗ್ಯ ಕಾರ್ಯಕ್ರಮ ಆಯೋಜನೆ ಹಾಗೂ





ಯಶಸ್ವಿಗೊಳಿಸಿಕೊಂಡು ಬಂದಿರುವ ಕುರಿತು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಾಹಿತಿ ನೀಡಿದರು. ಸಿಬ್ಬಂದಿ ಮಂಜಪ್ಪ ಅವರು ಗ್ರಾಮ ಪಂಚಾಯತ್ ಕಾರ್ಯಪಡೆ ಸಮಿತಿ ವತಿಯಿಂದ ಗ್ರಾಮ ಆರೋಗ್ಯ ಕಾರ್ಯಕ್ರಮ ಕುರಿತು ನಿರ್ವಹಿಸುತ್ತಿರುವ ದಾಖಲೀಕರಣ, ಮಾಡುತ್ತಿರುವ ಕುರಿತು ಮಾಹಿತಿ ನೀಡಿದರು.ಮಾದರಿ ಸಾಮಾನ್ಯ ಸಭೆಯಲ್ಲಿ ಗ್ರಾಪಂ ಸದಸ್ಯರುಗಳು ಮಾತನಾಡಿ, ಪಂಚಾಯಿತಿ ವ್ಯಾಪ್ತಿಯಲ್ಲಿ ಆರೋಗ್ಯ ಶಿಬಿರ ಆಯೋಜನೆ ಮಾಡಿದಾಗ ಆಯಾ ವಾರ್ಡ್ ಸದಸ್ಯರು ತಮ್ಮದೇ ಆದ ಕರ್ತವ್ಯ ಹಾಗೂ ಜವಾಬ್ದಾರಿ ನಿರ್ವಹಿಸುತ್ತಾ ಬಂದಿದ್ದಾರೆ. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಕ್ರಿಯಾ ಯೋಜನೆ ರಚಿಸಲು ಸೂಚನೆ ನೀಡಿದರು. ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ಆರೋಗ್ಯ ಕಾರ್ಯಕರ್ತರು ಪರಸ್ಪರ ಮಾರ್ಚ್ 2024 ರ ಕ್ರಿಯಾಯೋಜನೆ ರಚನೆ ಕುರಿತಾಗಿ ಚರ್ಚಿಸಿ ಅನುಮೋದನೆ ನೀಡಿದರು. ದಾಖಲೀಕರಣ, ಗ್ರಾಮ ಪಂಚಾಯತ್ ನಿರ್ವಹಿಸಿರುವ ವರದಿಗಳು, ಹಾಗೂ ಫಲಾನುಭವಿಗಳು ಮತ್ತು ಕಾರ್ಯಪಡೆ ಸದಸ್ಯರ ಸ್ಪಂದನೆ, ಈ ಎಲ್ಲ ಅಂಶಗಳನ್ನು ಅಧ್ಯಯನ ತಂಡದ ಸದಸ್ಯರು ಪರಿಶೀಲನೆ ಮಾಡಿದರು. ಮುದಹದಡಿ ಗ್ರಾಮ ಪಂಚಾಯತ್ ಕಾರ್ಯಪಡೆ ವತಿಯಿಂದ ಎರಡು ವರ್ಷಗಳಿಂದ ಗ್ರಾಮ ಆರೋಗ್ಯ ಕಾರ್ಯಕ್ರಮ ಆಯೋಜನೆ ಹಾಗೂ ಯಶಸ್ವಿಗೊಳಿಸಿಕೊಂಡು ಬಂದಿರುವ ಕುರಿತಾಗಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮಾಹಿತಿ ನೀಡಿದರು. ಅಧ್ಯಯನ ತಂಡದೊಂದಿಗೆ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು, ಆರೋಗ್ಯ ಸಿಬ್ಬಂದಿಗಳು, ಕಾರ್ಯದರ್ಶಿ ನೋಡಲ್ ಅಧಿಕಾರಿಗಳು ಅಗತ್ಯ ಮಾಹಿತಿಗಳ ಕುರಿತು ಚರ್ಚಿಸಿದರು. ಅನಿಸಿಕೆ ಅಭಿಪ್ರಾಯಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು.

ನರೇಗಾ ಕೂಲಿಕಾರರ ಆರೋಗ್ಯ ತಪಾಸಣೆ ಶಿಬಿರವನ್ನು ಅತಿಥಿ ಗಣ್ಯರು ವೀಕ್ಷಿಸಿದರು. ಹಾಗೂ ಕಾರ್ಯಕ್ರಮ ಆಯೋಜನೆಯ ಅಧ್ಯಯನ ತಂಡ ಪರಿಶೀಲನೆ ಮಾಡಿದರು. ಸಭೆಯಲ್ಲಿ ಕುಳಿತು ಕೊಳ್ಳಲು ಶಾಮಿಯಾನ ನೆರಳಿನ ವ್ಯವಸ್ಥೆ, ಚೇರ್, ಟೇಬಲ್ ವ್ಯವಸ್ಥೆ, ಕುಡಿಯಲು ಅಗತ್ಯ ನೀರಿನ ವ್ಯವಸ್ಥೆ, ಪ್ರಥಮ ಚಿಕಿತ್ಸಾ ಪೆಟ್ಟಿಗೆ, ಗ್ರಾಮ ಪಂಚಾಯತ್ ಕ□□ಲ್ಲಿರುವ ಉಪಕರಣಗಳ ಸ್ಥಿತಿ–ಗತಿ ಹಾಗೂ ಉಪಭೋಗ್ಯ ವಸ್ತುಗಳ ಲಭ್ಯತೆ ಹಾಗೂ ಫಲಾನುಭವಿಗಳಿಗೆ ತಪಾಸಣೆ ಮಾಡುವ ಎಲ್ಲ ಹಂತಗಳು, ದಾಖಲೀಕರಣ, ಗ್ರಾಮ ಪಂಚಾಯತ್ ನಿರ್ವಹಿಸಿರುವ ವರದಿಗಳು ಹಾಗೂ ಫಲಾನುಭವಿಗಳು ಮತ್ತು ಕಾರ್ಯಪಡೆ ಸದಸ್ಯರ ಸ್ಪಂದನೆ ಸೇರಿದಂತೆ ಈ ಎಲ್ಲ ಅಂಶಗಳನ್ನು ಪರಿಶೀಲನೆ ಮಾಡಿದರು.ಈ ಸಂದರ್ಭದಲ್ಲಿ ರಾಜ್ಯ ತಂಡದ ವತಿಯಿಂದ ಜನ್ಸ್ ಆಕ್ಸಫರ್ಡ್ ಯೂನಿವರ್ಸಿಟಿ ಪ್ರೋಫೆಸರ್ ಸ್ಯುಯ, ಜಾನ್ಸ್ ಹ್ಯಾಪ್ಕಿನ್ಸ್ ಬ್ಲೂಮ್ಬರ್ಗ್ ಸ್ಕೂಲ್ ಆಫ್ ಹೆಲ್ತ್ ಹಿರಿಯ ಸಂಶೋಧಕಿ ಶಾಲಿನಿ ಸಿಂಗ್ ಇದ್ದರು.

## ಫಾಸ್ಟ್ ನ್ಯೂಸ್

## ರಾಜ್ಯ ಕೈಗಾರಿಕೆಗಳ ಪುನಶ್ಚೇತನಕ್ಕೆ ಪ್ರಾಮಾಣಿಕ ಪ್ರಯತ್ನ : ರಘುಮೂರ್ತಿ.



» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕರ್ನಾಟಕ ರಾಜ್ಯ ಕೈಗಾರಿಕೆಗಳ ಮಂಡಳಿಯ ನೂತನ ಅಧ್ಯಕ್ಷರಾಗಿ ಸೋಮವಾರ ಬೆಂಗಳೂರಿನ ಮಂಡಳಿಯ ಕೇಂದ್ರ ಕಚೇರಿಯಲ್ಲಿ ಕ್ಷೇತ್ರದ ನೂರಾರು ಕಾರ್ಯಕರ್ತರ ಸಮ್ಮುಖದಲ್ಲಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದರು.

ಈಸಂದರ್ಭದಲ್ಲಿನೆರೆದಿದ್ದಎಲ್ಲಾಕಾರ್ಯಕರ್ತರು ಮುಖಂಡರು, ಮಂಡಳಿತ ನೂತನ ಅಧ್ಯಕ್ಷರಾದ ರಘುಮೂರ್ತಿಮುಖ್ಯಮಂತ್ರಿಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಜಯಕಾರ ಹಾಕಿದರು. ಪ್ರಾರಂಭದ ಹಂತದಲ್ಲಿ ಮಂಡಳಿಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಶಾಸಕರು ಹಿಂದೇಟು ಹಾಕಿದಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಲಹೆಯಂತೆ ಶಾಸಕರು ಅಧಿಕಾರ ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಹೊಸದುರ್ಗ ಕ್ಷೇತ್ರದ ಶಾಸಕ ಬಿ.ಜಿ.ಗೋವಿಂದಪ್ಪ ಸಹ ಆಹಾರ ನಿಗಮ ಮಂಡಳಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದರು. ಬೆಂಗಳೂರಿನ ರಾಜಾಜಿನಗರದಲ್ಲಿರುವ ಕರ್ನಾಟಕ ರಾಜ್ಯ ಕೈಗಾರಿಕೆಗಳ ಮಂಡಳಿಯ ಕಚೇರಿಯಲ್ಲಿ ಶಾಸಕರು ಅಧಿಕಾರ ಸ್ವೀಕರಿಸುವ ಹಿನ್ನೆಲೆಯಲ್ಲಿ ಕಚೇರಿ ಸುತ್ತಮುತ್ತಲು ಪಕ್ಷದ ಕಾರ್ಯಕರ್ತರು ಜಮಾಯಿಸಿದ್ದರು. ಅಧಿಕಾರ ಸ್ವೀಕರಿಸಿದ ಕೂಡಲೇ ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ ಶಾಸಕರನ್ನು ಸನ್ಮಾನಿಸಿ, ಅಭಿನಂದಿಸಿ ಶಾಸಕರ ಟಿ.ರಘುಮೂರ್ತಿ ಹಿರಿಯ ರಾಜಕಾರಣಿಯಾಗಿದ್ದು, ಸಂಯಮದಿಂದಲೇ ಎಲ್ಲಾ ಸಮಸ್ಯೆಗಳನ್ನು ನಿವಾರಿಸುವ ಶಕ್ತಿ ಹೊಂದಿದ್ದಾರೆ. ಕೈಗಾರಿಕ ಮಂಡಳಿ ರಾಜ್ಯದ ಆರ್ಥಿಕ ಹಿತದೃಷ್ಟಿಯಿಂದ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕಿದೆ. ಇಂತಹ ಸಂದರ್ಭದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಶಾಸಕ ಟಿ.ರಘುಮೂರ್ತಿಯವರಿಗೆಹೊಸಜವಾಬ್ದಾರಿನೀಡಿ ರಾಜ್ಯ ಕೈಗಾರಿಕೆಗಳ ಪುನರುತ್ಥಾನಕ್ಕೆ ಶ್ರಮಿಸುವಂತೆ ತಿಳಿಸಲಾಗಿದೆ. ಮುಂದಿನ ದಿನಗಳಲ್ಲಿ ಮಂಡಳಿತ ನೂತನ ಅಧ್ಯಕ್ಷರಾದ ಶಾಸಕ ಟಿ.ರಘುಮೂರ್ತಿ ಕೈಗಾರಿಕ ಮಂಡಳಿಗೆ ಹೊಸ ಶಕ್ತಿಯನ್ನು ತುಂಬುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಾರೆಂಬ ವಿಶ್ವಾಸವಿದೆ ಎಂದರು. ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ನೂತನ ಕರ್ನಾಟಕ ರಾಜ್ಯ ಕೈಗಾರಿಕೆಗಳಮಂಡಳಿಯಅಧ್ಯಕ್ಷಟಿ.ರಘುಮೂರ್ತಿ, ಮೂರುಬಾರಿ ಚುನಾವಣೆಯಲ್ಲಿ ಗೆಲುವು ಸಾಧಿಸಿ ಹ್ಯಾಟ್ರಿಕ್ ಸಾಧನೆ ಮಾಡಿದ್ದೇನೆ. ಪಕ್ಷದಲ್ಲಿ ಯಾವುದೇ ಸ್ಥಾನಬಯಸದೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕೆಂಬ ಹಂಬಲ ನನ್ನದು. ಈ ಹಿನ್ನೆಲೆಯಲ್ಲಿ ರಾಜ್ಯದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ಬೇಡವೆಂದು ಪತ್ರಬರೆದಿದ್ದೆ. ಆದರೂ ನಮ್ಮ ಮೇಲೆ ವಿಶ್ವಾಸಗೌರವವಿಟ್ಟು ಈ ದೊಡ್ಡ ಸ್ಥಾನ ನೀಡಿದ್ದಾರೆ. ಕೈಗಾರಿಕೆಗಳ ಪುನಶ್ಚೇನಕ್ಕೆ ಸಂಬಂಧಪಟ್ಟಂತೆ ರಾಜ್ಯದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು ನನಗೆ ಅಧ್ಯಕ್ಷ ಸ್ಥಾನ ನೀಡಿದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಪಕ್ಷದ ಎಲ್ಲಾ ಹಂತದ ದುರೀಣರನ್ನು ಅಭಿನಂದಿಸುವುದಾಗಿ ತಿಳಿಸಿದರು.

## ಅಕ್ರಮಮರಳು ಸಾಗಾಟ ಸಂಪೂರ್ಣ ನಿಯಂತ್ರಿಸಲು ಎಲ್ಲರೂ ತಾಲ್ಲೂಕು ಆಡಳಿತಕ್ಕೆ ಸಹಕಾರ ನೀಡಿ



» **ಚಳ್ಳಕೆರೆ**

ತಾಲ್ಲೂಕಿನ ಏಕೈಕ ಜೀವನದಿ ವೇದಾವತಿ ನದಿಪಾತ್ರದಲ್ಲಿ ಅಕ್ರಮ ಮರಳು ಸಾಗಾಣಿಕೆ ನಡೆಯುತ್ತಿರುವಬಗ್ಗೆಸಾರ್ವಜನಿಕರಿಂದಹಲವಾರು ಆಕ್ಷೇಪಗಳು ಬಂದ ಹಿನ್ನೆಲೆಯಲ್ಲಿ, ಯಾವುದೇ ಕಾರಣಕ್ಕೂ ಅಕ್ರಮವಾಗಿ ಮರಳು, ಮಣ್ಣು, ಕಲ್ಲು ಸಾಗಾಟ ಮಾಡದಂತೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆ ಎಚ್ಚರಿಕೆ ವಹಿಸಬೇಕು. ಅಕ್ರಮ ಮರಳು ಸಾಗಾಣಿಕೆ ತಡೆಗಟ್ಟುವ ಜವಾಬ್ದಾರಿಯನ್ನು ಎಲ್ಲಾ ಅಧಿಕಾರಿಗಳು ಹೊರಬೇಕೆಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕು ಕಚೇರಿ ಆವರಣದಲ್ಲಿ ಅಕ್ರಮ ಮರಳು, ಕ್ವಾರಿ, ಮಣ್ಣು ಸಾಗಾಣಿಕೆ ಕುರಿತಂತೆ ಕರೆಯಲಾಗಿದ್ದ ಮೂರು ತಾಲ್ಲೂಕುಗಳ ಟಾಸ್‌ಪೋಸ್ಕ್ ಸಮಿತಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

### ರಾಷ್ಟ್ರೀಯ ಬ್ಯಾಂಕುಗಳಿಗೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಸೂಚನೆ

# ಅರ್ಹ ಕಿರು ಆಹಾರ ಉದ್ದಿಮೆಗಳಿಗೆ ನೆರವು ನೀಡಿ

» **ಚಿತ್ರದುರ್ಗ**

ಜಿಲ್ಲೆಯ ಹಲವು ಸ್ವ-ಸಹಾಯ ಗುಂಪುಗಳು ಹಾಗೂ ಆಸಕ್ತಿ ಇರುವ ವ್ಯಕ್ತಿಗಳು ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಸ್ಥಾಪಿಸಲು ಉತ್ಸಕರಾಗಿದ್ದಾರೆ. ಇಂತಹವರಿಗೆ ರಾಷ್ಟ್ರೀಯ ಬ್ಯಾಂಕುಗಳು ಹಣಕಾಸು ನೆರವು ನೀಡಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಹೇಳಿದರು.

ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಯೋಜನೆ(ಪಿಎಂಎಫ್‌ಎಂಇ) ಹಾಗೂ ಕೃಷಿ ಮೂಲಭೂತ ಸೌಕರ್ಯ ನಿಧಿ ಕುರಿತು ಸೋಮವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಅವರು ಮಾತನಾಡಿದರು.

ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಪ್ರೋತ್ಸಾಹಿಸಲು ಹಾಗೂ ಹಾಲಿ ಕಾರ್ಯನಿರ್ವಹಿಸುತ್ತಿರುವ ಅಸಂಘಟಿತ ಉದ್ದಿಮೆಗಳನ್ನು ವಿಸ್ತರಿಸಲು ಯೋಜನೆಯನ್ನು ಜಾರಿಗೊಳಿಸಲಾಗಿದೆ. ಜಿಲ್ಲೆಯಲ್ಲಿ 380 ಘಟಕಗಳಿಗೆ ಆರ್ಥಿಕ ನೆರವು ನೀಡಲು ಗುರಿ ಹೊಂದಲಾಗಿದ್ದು, ಒಟ್ಟು 397 ಅರ್ಜಿಗಳು ಸಲ್ಲಿಕೆಯಾಗಿವೆ. ಇದರಲ್ಲಿ 205 ಅರ್ಜಿಗಳ ಯೋಜನಾ ವರದಿ ಸಿದ್ದವಾಗಿದ್ದು, 192 ಅರ್ಜಿಗಳು ಬ್ಯಾಂಕ್ ಸಹಾಯಧನಕ್ಕೆ ಸ್ವೀಕೃತವಾಗಿವೆ. 2020-21 ಸಾಲಿನಿಂದ 2023-24 ಸಾಲಿನವರಿಗೆ 60 ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿದೆ. 59 ಅರ್ಜಿಗಳು ಬ್ಯಾಂಕುಗಳಿಂದ ನಾನಾ ಕಾರಣಗಳಿಗೆ ತಿರಸ್ಕೃತಗೊಂಡಿವೆ. 41 ಅರ್ಜಿ ಮಂಜೂರಾತಿ ಕಾರ್ಯಪ್ರಗತಿಯಲ್ಲಿವೆ. ಎಲ್ಲಾ ರಾಷ್ಟ್ರೀಯ ಬ್ಯಾಂಕುಗಳು ಈ ಅರ್ಜಿಗಳನ್ನು ಪರಿಶೀಲಿಸಿ ಹಣಕಾಸು ಮಂಜೂರಾತಿ ನೀಡಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಬ್ಯಾಂಕ್ ಅಧಿಕಾರಿಗಳಲ್ಲಿ ಕೋರಿದರು.



ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಯೋಜನೆಯಡಿ 18 ವರ್ಷ ಮೇಲ್ಪಟ್ಟ ಯಾವುದೇ ವ್ಯಕ್ತಿ, ಉದ್ದಿಮೆಯ ಮಾಲಿಕತ್ವ ಅಥವಾ ಪಾಲುದಾರಿಕೆ ಹೊಂದಿದಲ್ಲಿ ಅರ್ಜಿ ಸಲ್ಲಿಸಬಹುದು. ಇದಕ್ಕೆ ಯಾವುದೆ ವಿದ್ಯಾರ್ಹತೆಯ ಮಾನದಂಡ ಇಲ್ಲ. ಸರ್ಕಾರದ ಇತರೆ ಯೋಜನೆಗಳಲ್ಲಿ ಸಬ್ಸಿಡಿ ಸಾಲ ಪಡೆದಿದ್ದರೂ ಈ ಯೋಜನೆಯಡಿ ಬಡ್ಡಿ ಹಾಗೂ ಸಹಾಯಧನಕ್ಕಾಗಿ ಅರ್ಹತೆ ಹೊಂದಿರುತ್ತಾರೆ. ವೈಯಕ್ತಿಕ ಉದ್ದಿಮೆಗಳಿಗೆ, ಮಾಲೀಕತ್ವದ ಸಂಸ್ಥೆಗಳಿಗೆ, ಪಾಲುದಾರಿಕೆ ಸಂಸ್ಥೆಗಳಿಗೆ, ಖಾಸಗೀ ಸಂಸ್ಥೆಗಳಿಗೆ, ರೈತ ಉತ್ಪಾದಕ ಸಂಸ್ಥೆಗಳಿಗೆ, ಸರ್ಕಾರೇತರ ಸಂಸ್ಥೆಗಳಿಗೆ ಮತ್ತು ಸ್ವಸಹಾಯ ಸಂಘಗಳಿಗೆ ಸಾಲ ಸಂಪರ್ಕಿತ ಶೇ.35 ರಷ್ಟು ಸಹಾಯಧನ ಜೊತೆಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಶೇ.15 ರಷ್ಟು ಸಹಾಯಧನ ನೀಡಲಾಗುವುದು. ಗರಿಷ್ಠ 15 ಲಕ್ಷ ಅಥವಾ ಶೇ.50 ರಷ್ಟು ಸಹಾಯಧನವನ್ನು ಪಡೆಯಬಹುದು ಎಂದರು.

ಪ್ರಾಥಮಿಕ ಬಂಡವಾಳವಾಗಿ ಸ್ವಸಹಾಯ ಸಂಘಗಳ ಸದಸ್ಯರುಗಳಿಗೆ ದುಡಿಯುವ ಬಂಡವಾಳ ಮತ್ತು ಸಣ್ಣ ಉಪಕರಣಗಳ ಖರೀದಿಗಾಗಿ ಪ್ರತಿ ಸದಸ್ಯರಿಗೆ ಗರಿಷ್ಠ ರೂ.40,000 ನೀಡಲಾಗುವುದು. ಸ್ವಸಹಾಯ ಸಂಘದವರಿಗೆ ಗರಿಷ್ಠ 4 ಲಕ್ಷ ರೂ. ವರೆಗೆ ಪಡೆಯಲು ಅವಕಾಶವಿದೆ. ಗರಿಷ್ಟ ಯೋಜನಾ ವೆಚ್ಚ ರೂ.10 ಕೋಟಿಗೆ ರೂ.3 ಕೋಟಿ ಗರಿಷ್ಟ ಸಹಾಯಧನ ನೀಡಲಾಗುವುದು. ಆಹಾರ ಪದಾರ್ಥಗಳ ವಿಂಗಡಣೆ, ಶ್ರೇಣೀಕರಣ, ಸಂಗ್ರಹಣೆ, ಸಾಮಾನ್ಯ ಸಂಸ್ಕರಣೆ, ಪ್ಯಾಕೇಜಿಂಗ್ ಮತ್ತು ಪ್ರಯೋಗಾಲಯ ಇತ್ಯಾದಿ ಸ್ಥಾಪಿಸಲು ಅವಕಾಶವಿದೆ. ಬ್ರಾಂಡಿಗ್, ಮತ್ತು ಮಾರುಕಟ್ಟೆ ವಿಸ್ತರಣೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು ಎಂದರು.ಹಿಟ್ಟಿನ ಗಿರಣಿಗಳು, ಎಣ್ಣೆ ಗಾಣ, ಬೇಕರಿ, ಬಾಳೇಕಾಯಿ ಉತ್ಪನ್ನ, ಅರಿಶಿಣ ಸಂಸ್ಕರಣೆ, ತೆಂಗನಕಾಯಿ ಉತ್ಪನ್ನಗಳ ಸಂಸ್ಕರಣೆ, ಹಪ್ಪಳ, ಸಂಡಿಗೆ, ಉಪ್ಪಿನಕಾಯಿ ಸೇರಿದಂತೆ ಆಹಾರ ಉತ್ಪನ್ನಗಳು, ಮಸಾಲ ಹಾಗೂ ಸಾಂಬಾರು ಪದಾರ್ಥಗಳು, ಸಿರಿಧಾನ್ಯ, ಜೇನು, ಕಾಫಿ ಮತ್ತು ಟೀ ಪುಡಿ, ಚಾಕೊಲೇಟ್, ಶ್ಯಾವಿಗೆ, ಸಿಹಿ ಹಾಗೂ ಖಾರ ತಿಂಡಿಗಳ ತಯಾರಿಕೆ ಸ್ಥಾಪಿಸಲು ಯೋಜನೆಯ ಲಾಭಪಡೆಯಬಹುದು. ಆದರೆ ಹೋಟೆಲ್ ಹಾಗೂ ರೆಸ್ಟೋರೆಂಟ್ ಘಟಕಗಳ ಸ್ಥಾಪನೆಗೆ ಯೋಜನಯಡಿ ಸಹಾಯಧನ ನೀಡಲಾಗುವುದಿಲ್ಲ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ತಿಳಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ 1.2 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ ಬೆಳೆಯುತ್ತಾರೆ. ಶುದ್ದ ಶೇಂಗಾ ಎಣ್ಣೆ ತಯಾರಿಕೆಗೆ ಗಾಣಗಳನ್ನು ಸ್ಥಾಪಿಸಲು ಬ್ಯಾಂಕುಗಳು ಹೆಚ್ಚಿನ ಸಾಲ ಸೌಲಭ್ಯ ನೀಡಬೇಕು. ಇದೇ ರೀತಿ ಅಡಿಕೆ ಉತ್ಪನ್ನ ಸಂಸ್ಕರಣೆಗೂ ಸಾಲ ನೀಡಬಹುದು. ಇದೇ ರೀತಿ ಕೃಷಿ ಮೂಲಭೂತ ಸೌಕರ್ಯಗಳ ನಿಧಿ ಅಡಿಯಲ್ಲೂ ಕೃಷಿ ಚಟುವಟಿಕೆಗಳು, ಗೋದಾಮು, ಮಾರುಕಟ್ಟೆ, ಪ್ಯಾಕ್ ಹೌಸ್, ಸಾಗಾಣಿಕೆ, ವಿಂಗಡಣೆ ಮತ್ತು ಶ್ರೇಣೀಕರಣ, ಹಣ್ಣು ಮಾಗಿಸುವ ಉದ್ದಿಮೆಗಳಿಗೂ ಸಹಾಯ ನೀಡಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ತಿಳಿಸಿದರು.

ಕೃಷಿ ಉಪನಿರ್ದೇಶಕ ಪ್ರಭಾಕರ್ ಮಾತನಾಡಿ, ಕಿರು ಆಹಾರ ಸಂಸ್ಕರಣ ಉದ್ದಿಮೆಗಳು ಗ್ರಾಮೀಣ ಭಾಗದಲ್ಲಿಯೇ ಹೆಚ್ಚಾಗಿ ಕಾರ್ಯನಿರ್ವಹಿಸುತ್ತಿವೆ. ಬ್ಯಾಂಕುಗಳು ಪಟ್ಟಣ ಹಾಗೂ ನಗರಗಳಲ್ಲಿ ಉದ್ದಿಮೆ ಸ್ಥಾಪಿಸುವಂತೆ ಅರ್ಜಿದಾರರ ಮೇಲೆ ಒತ್ತಡ ತರಬಾರದು. ಸರ್ಕಾರ ಆಹಾರ ಸಂಸ್ಕರಣಾ ಉದ್ದಿಮೆಗೆ ಇಂಬು ನೀಡುವ ನಿಟ್ಟಿನಲ್ಲಿ ಯೋಜನೆ ಜಾರಿಗೊಳಿಸಿದೆ. ಈ ಎಲ್ಲಾ ಕೃಷಿ ಆಧಾರಿತ ಉತ್ಪನ್ನಗಳನ್ನು ಒಂದು ಒಕ್ಕೂಟದ ಅಡಿ ತಂದು, ಕೆಎಂಎಫ್ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲು ಚಿಂತನೆ ನಡೆಸುತ್ತಿದೆ. ಬ್ಯಾಂಕುಗಳು ಅರ್ಜಿದಾರರಿಗೆ ಆಧಾರ ನೀಡುವಂತೆ ಅಥವಾ ಇತರೆ ಕಾರಣ ನೀಡಿ ಯೋಜನೆಗೆ ಮಂಜೂರಾತಿ ನೀಡುವುದನ್ನು ತಡೆಯಬಾರದು ಎಂದು ಕೋರಿದರು.

ನಬಾರ್ಡ್ ಜಿಲ್ಲಾ ವ್ಯವಸ್ಥಾಪಕಿ ಕವಿತಾ ಶಶಿಧರ ಮಾತನಾಡಿ, ಸಭೆ ಸಮಾರಂಭಗಳಲ್ಲಿ ಶಾಲು ಹೂವಿನ ಗುಚ್ಚ ನೀಡುವ ಬದಲು ಸಂಸ್ಕರಿಸಿದ ಕೃಷಿ ಉತ್ಪನ್ನಗಳನ್ನು ಅತಿಥಿಗಳಿಗೆ ನೀಡುವುದರ ಮೂಲಕ ಆಹಾರ ಸಂಸ್ಕರಣ ಉದ್ಯಮಕ್ಕೆ ಪ್ರೋತ್ಸಾಹ ನೀಡುವಂತೆ ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ವೇದಾ ನ್ಯಾಚುರಲ್ ವತಿಯಿಂದ ಸಾಂಪ್ರದಾಯಿಕ ಶೈಲಿಯಲ್ಲಿ ಮರದ ಗಾಣದ ಎಣ್ಣೆಯಲ್ಲಿ ತೆಗೆದ ಉತ್ಪನ್ನಗಳನ್ನು ಬ್ಯಾಂಕ್ ಅಧಿಕಾರಿಗಳಿಗೆ ನೀಡಿ, ಗಾಣದ ಎಣ್ಣೆ ಮಹತ್ವನ್ನು ತಿಳಿಸಲಾಯಿತು.

ಸಭೆಯಲ್ಲಿ ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಬಿ.ಆನಂದ, ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ತಿಪ್ಪೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಪಶು ಸಂಗೋಪನ ಇಲಾಖೆ ಉಪನಿರ್ದೇಶಕ ಡಾ.ಬಾಬುರತ್ನ ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರ್ವಜ್ಞನ ತ್ರಿಪದಿಗಳಲ್ಲಿ ವಿಶ್ವಮಾನವ ಸಂದೇಶವಿದೆ

» **ದಾವಣಗೆರೆ**

ವಿಶ್ವಮಾನವ ಸಂದೇಶ ಹಾಗೂ ಜೀವನದ ಮೌಲ್ಯಗಳು ಸರ್ವಜ್ಞನ ತ್ರಿಪದಿಗಳಲ್ಲಿ ಇದೆ ಎಂದು ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರಿನ್ ಭಾನು ಎಸ್ ಬಳ್ಳಾರಿ ತಿಳಿಸಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದಲ್ಲಿ ನಡೆದ ಕಾಯಕ ಶರಣರ ದಿನಾಚರಣೆ ಕಾರ್ಯಕ್ರಮದಲ್ಲಿ ಶರಣರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಅವರು ಮಾತನಾಡಿದರು ಸರ್ವಜ್ಞ ಸತ್ಯ, ಶುದ್ಧವಾದ ಕಾಯಕವನ್ನು ಮಾಡುತ್ತಾ ಸಮಾಜದ ಅಂಕುಡೊಂಕುಗಳನ್ನು ತ್ರಿಪದಿಗಳ ಮೂಲಕ ತಿದ್ದುವಲ್ಲಿ ತಮ್ಮದೆ ಆದ ಛಾಪು ಮೂಡಿಸಿದ್ದಾರೆ ಎಂದರು.

ಶರಣರಾದ ಮಾದಾರ ಚನ್ನಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ, ಮಾದಾರ ಧೂಳಯ್ಯ, ಉರಿಲಿಂಗ ಪೆದ್ದಿಯವರು ಶರಣ ಪಡೆಯ ಮಹನೀಯರಾಗಿದ್ದಾರೆ. ಇವರನ್ನು ಪಂಚ ತಜ್ಞರು ಎಂದು ಕರೆಯುತ್ತಾರೆ, ಇವರು ನಿಜವಾದ ಕಾಯಕ ಜೀವಿಗಳು ಹಾಗೆ ಬಸವಣ್ಣನವರು ಹೇಳುತ್ತಾರೆ. ಕಾಯಕವೇ ಕೈಲಾಸ, ಯಾವುದೇ ಒಂದು ಕಾಯಕ ಸಣ್ಣದು ದೊಡ್ಡದು ಇಲ್ಲ, ಕಾಯಕದಲ್ಲಿ ನಮಗೆ ನಂಬಿಕೆ ಮತ್ತು ವಿಶ್ವಾಸ ಇರಬೇಕು. ಅದೇ ಅಂತರಂಗ ಶುದ್ಧಿ, ಅದೇ ಬಹಿರಂಗ ಶುದ್ಧಿ ಎಂದು ತಿಳಿಸಿದರು.ನಾವು ಜಯಂತಿಗಳನ್ನು ಏಕೆ ಮಾಡುತ್ತೇವೆ, ಯಾವ ಕಾರಣಕ್ಕೆ ಮಾಡಬೇಕು ಎಂದು ಅವರ ವಚನಗಳ ಮೌಲ್ಯಗಳನ್ನು ನಿತ್ಯ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ನಾವು ಜಾತಿಗಳಿಗೆ ಸೀಮಿತವಾಗದೆ, ಎಲ್ಲ ಮಹನೀಯರ ಬಗ್ಗೆ ತಿಳಿದುಕೊಂಡು ಅವರಆದರ್ಶಗಳನ್ನುಪಾಲಿಸಬೇಕು ಎಂದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ................00ಕ ್ರಷ್ಣನಾಯಕ್, ಪಶುಸಂಗೋಪನ ಇಲಾಖೆ ಉಪನಿರ್ದೇಶಕರು ಡಾ.ಚಂದ್ರಶೇಖರ್ ಸುಂಕದ, ದಾವಣಗೆರೆ ವಿಶ್ವವಿದ್ಯಾನಿಲಯ ಪ್ರಾಧ್ಯಾಪಕರಾದ ಡಾ.ಎಚ್ ವಿಶ್ವನಾಥ್, ಹಿರಿಯ ವೃತ್ತಿ ರಂಗಭೂಮಿಯ ಕಲಾವಿದರು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.



## ಕೇಂದ್ರದ ತಾರತಮ್ಯ ಖಂಡಿಸಿ ಪ್ರತಿಭಟನೆ




**ಚಿತ್ರದುರ್ಗ:** ಅನುದಾನ, ತೆರಿಗೆ ಹಣ ಹಂಚಿಕೆಯಲ್ಲಿ ಕೇಂದ್ರ ಸರ್ಕಾರ ರಾಜ್ಯಕ್ಕೆ ಅನ್ಯಾಯವೆಸಗುತ್ತಿರುವುದನ್ನು ಖಂಡಿಸಿ ಭಾರತ ಕಮ್ಯುನಿಸ್ಟ್ ಪಕ್ಷ ಜಿಲ್ಲಾ ಪಂಚಾಯಿತಿಯಲ್ಲಿರುವ ಕೇಂದ್ರ ಮಂತ್ರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಎ.ನಾರಾಯಣಸ್ವಾಮಿರವರ ಆಪ್ತರ ಮೂಲಕ ಪ್ರಧಾನಿ ನರೇಂದ್ರಮೋದಿಗೆ ಮನವಿ ಸಲ್ಲಿಸಿತು.ಭದ್ರಾಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಿರುವ ಕೇಂದ್ರ ಸರ್ಕಾರ ಐದು ಸಾವಿರದ 300 ಕೋಟಿ ರೂ.ಗಳನ್ನು ಕಾಯ್ದಿರಿಸಿ ಇದುವರೆವಿಗೂ ಬಿಡುಗಡೆಗೊಳಿಸಿಲ್ಲ. ರಾಜ್ಯ ಸರ್ಕಾರ ಕೇಂದ್ರದ ಮೇಲೆ ನೆಪ ಹೇಳಿಕೊಂಡು ಕಾಲ ಕಳೆಯುತ್ತಿದೆಯೇ ವಿನಃ ಕಾಮಗಾರಿ ಮಾತ್ರ ಜಾಗ ಬಿಟ್ಟು ಕದಲಿಲ್ಲ. ಇದರಿಂದ ಬರಪೀಡಿತ ಜಿಲ್ಲೆ ಚಿತ್ರದುರ್ಗಕ್ಕೆ ನೀರು ಹರಿಯುವುದು ಯಾವಾಗ ಎಂದು ಪ್ರತಿಭಟನಾಕಾರರು ಪ್ರಶ್ನಿಸಿದರು? ಕಳೆದ ನಾಲ್ಕು ವರ್ಷಗಳಿಂದ ರಾಜ್ಯಕ್ಕೆ ಸಲ್ಲಬೇಕಾದ ಜಿ.ಎಸ್.ಟಿ. ತೆರಿಗೆ ಹಣವನ್ನು ನೀಡದೆ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಇದರಿಂದ 45 ಸಾವಿರ ಕೋಟಿ ರೂ. ನಷ್ಟವಾಗಿದೆ. ಬರ ಪರಿಹಾರದ ಹಣವನ್ನು ಕೂಡಲೆ ಬಿಡುಗಡೆಗೊಳಿಸಬೇಕು. ಇಲ್ಲವಾದಲ್ಲಿ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ. ವಿರುದ್ದ ಮತ ಚಲಾಯಿಸಬೇಕಾಗುತ್ತದೆಂದರು.

## ಪ್ರಮುಖ ಸುದ್ದಿ

### ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷ ಬಿ.ಇ.ಜಗದೀಶ್ ಆಕ್ರೋಶ

# ಭದ್ರಾ ವಿಚಾರದಲ್ಲಿ ಸಚಿವರ ಗೊಂದಲದ ಹೇಳಿಕೆ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಜೀವನಾಡಿಯಾದ ಅಪ್ಪರ್ ಭದ್ರಾ ಯೋಜನೆಗೆ ಕೇಂದ್ರ ಸರ್ಕಾರ 5,300 ಕೋಟಿ ರೂ.ಗಳನ್ನು ನೀಡುವುದಾಗಿ ಹೇಳಿತ್ತು. ಆದರೆ ಇದರ ಬಗ್ಗೆ ತನ್ನ ಬಜೆಟ್‌ನಲ್ಲಿ ಯಾವ ಮಾತನ್ನು ಹೇಳಿಲ್ಲ. ಅಲ್ಲದೆ ಈ ಭಾಗದ ಸಂಸದರು ಸಹಾ ಇದರ ಬಗ್ಗೆ ಚಕಾರ ಸಹ ಎತ್ತಿಲ್ಲ ಎಂದು ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷ ಬಿ.ಇ.ಜಗದೀಶ್ ಆಕ್ರೋಶ ವ್ಯಕ್ತಪಡಿಸಿದರು.ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೀರಿಗಾಗಿ ಈ ಭಾಗದ ರೈತರು ಹೋರಾಟವನ್ನು ನಡೆಸುತ್ತಿದ್ದರು, ಇದರ ಬಗ್ಗೆ ಯಾವ ಚುನಾಯಿತ ಪ್ರತಿನಿಧಿಗಳು ಗಮನ ನೀಡಿಲ್ಲ. ಅವರ ಬಗ್ಗೆ ಕಾಳಜಿಯನ್ನು ಸಹಾ ತೋರಿಸಿಲ್ಲ, ಭದ್ರ ಯೋಜನೆ ಕುಂಠಿತಾ ಸಾಗುತ್ತಿದೆ ಎಂದರು.ಕೇಂದ್ರ ಸರ್ಕಾರ ಹಣವನ್ನು ನೀಡುವುದಾಗಿ ತಿಳಿಸಿತ್ತು.



ಆದರೆ ಈಗ ಇದರ ಬಗ್ಗೆ ಯಾವ ಚಕಾರವನ್ನು ಎತುತ್ತಿಲ್ಲ. ಚಿತ್ರದುರ್ಗ ಹಿಂದುಳಿದ ಪ್ರದೇಶವಾಗಿದ್ದು, ಬಡತನ ರೇಖೆಯಲ್ಲಿದೆ. ಮಳೆಯ ಪ್ರಮಾಣ ಕಡಿಮೆ, ಕೊಳವೆಬಾವಿಯಲ್ಲಿ 1000 ಅಡಿ ಕೊರೆದರು ಸಹಾ ನೀರು ಸಿಗುತ್ತಿಲ. ಅಪ್ಪರ್ ಭದ್ರಾ ಜಾರಿಯಾದರೆ ನೀರು ಸಿಗುತ್ತದೆ ಆದರೆ ಅದು ಜಾರಿಯಾಗುವಲ್ಲಿ ಮೀನಾಮೇಷವಾಗುತ್ತಿದೆ ಎಂದು ದೂರಿದರು.ಕೇಂದ್ರದಿಂದ ಭದ್ರೆಗೆ ಹಣವನ್ನು ಬಡುಗಡೆ ಮಾಡಿಸುವುದು ಈ ಭಾಗದ ಸಂಸದರ ಕೆಲಸವಾಗಿದೆ. ಅದನ್ನು ಮಾಡುವುದನ್ನು ಬಿಟ್ಟು ರಾಜ್ಯ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ. ಇದು ಸರಿಯಾದ ರೀತಿಯಲ್ಲ. ಭದ್ರಾ ಯೋಜನೆ ವಿಚಾರದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ರಾಜಕೀಯ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಭದ್ರಾ ನೀರಿಗಾಗಿ ರೈತರು ಹೋರಾಟವನ್ನು ನಡೆಸುತ್ತಿದ್ದು ಇದಕ್ಕೆ ಆಮ್ ಆದ್ಮಿ ಪಾರ್ಟಿ ಬೆಂಬಲವನ್ನು ನೀಡುವುದರ ಮೂಲಕ ರೈತರಿಗೆ ಧೈರ್ಯವನ್ನು ತುಂಬುವ ಕಾರ್ಯವನ್ನು ಮಾಡುತ್ತದೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ಯೋಜನೆಗೆ ಹಣವನ್ನು ನೀಡಿದರೆ ಅದನ್ನು ಅದಕ್ಕೆ ಬಳಕೆ ಮಾಡಬೇಕು, ಬೇರೆಯದಕ್ಕೆ ಬಳಕೆ ಮಾಡುವಂತಿಲ್ಲ ಎಂಬ ನಿಯಮ ಇದೆ. ಅದನ್ನು ರಾಜ್ಯ ಸರ್ಕಾರ ಪಾಲಿಸುತ್ತಿದೆ. ಆದರೆ ಈ ವಿಚಾರದಲ್ಲಿ ಸಂಸದರು ರೈತರಿಗೆ ಗೊಂದಲ ಉಂಟು ಮಾಡುತ್ತಿದ್ದಾರೆ ಎಂದು ದೂರಿದರು.ನಿಸಾರ್ ಆಹ್ಮದ್, ರಾಮಪ್ಪ, ಕುಬೇಂದ್ರ ನಾಯ್ಕ, ಲೋಕೇಶ್ ಜ್ಯೋತಿ, ವಿನೋದಮ್ಮ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T